ಸಂಪುಟ : 10 ಸಂಚಿಕೆ: 180 ಪುಟ : 4+2 ಬೆಲೆ: 3.00 ಶನಿವಾರ ಆಗಸ್ಟ್ 23 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 180 Pages : 4+2 Price : 3.00 Saturday August 23 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಇಲಾಖೆಯ 13 ಫಲಾನುಭವಿ ಆಧಾರಿತ ಯೋಜನೆಗಳನ್ನು 2025–26ನೇ ಸಾಲಿನಲ್ಲಿ ಸುವಿಧಾ ಯೋಜನೆ ಇವರಿಂದ ಡಿ.ಬಿ.ಟಿ (ನೇರ ನಗದು ವರ್ಗಾವಣೆ)ಆನ್‌ಲೈನ್ ವೇದಿಕೆ ತಂತ್ರಾಂಶದಡಿ ಅಳವಡಿಸಲಾಗುತ್ತಿದೆ. ಈ ಯೋಜನೆಗಳನ್ನು ಆನ್ಲೈನ್ ವೇದಿಕೆಯಿಂದ ಅನುಷ್ಠಾನಗೊಳಿಸುವ ಉದ್ದೇಶದಿಂದ ವಿಕಲಚೇತನರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆಯಡಿ ಡಿ.ಬಿ.ಟಿ (ನೇರ ನಗದು ವರ್ಗಾವಣೆ) ಆನ್‌ಲೈನ್ ವೇದಿಕೆಯಲ್ಲಿ ಅಳವಡಿಸಲಾಗಿರುವ ಯೋಜನೆಗಳ ಪಟ್ಟಿ ಈ ಕೆಳಗಿನಂತಿವೆ.

ಸದರಿ ಯೋಜನೆಗಳಿಗೆ 2025–26ನೇ ಸಾಲಿಗೆ ವಿಕಲಚೇತನ ಫಲಾನುಭವಿಗಳು ಆನ್ಲೈನ್ ಸೇವಾ ಸಿಂಧು ತಂತ್ರಾಂಶದ ಮೂಲಕ ಗ್ರಾಮ ಒನ್ ಮತ್ತು ಕರ್ನಾಟಕ ಒನ್ ಹಾಗೂ ನೇರವಾಗಿಯು ಸಹ ವಿಕಲಚೇತನರ ವ್ಯಕ್ತಿಗಳು ಅರ್ಜಿ ಸಲ್ಲಿಸಲು ಸೇವಾಸಿಂಧು (https://sevasindhu.karnataka.gov.in/Sevasindhu/Kannda) ಪೋರ್ಟಲ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಲು ಪ್ರಾರಂಭ ದಿನಾಂಕ:20/08/2025 ಮತ್ತು ಕೊನೆಯ ದಿನಾಂಕ:30/09/2025 ಎಂದು ಅಂಗವಿಕಲರ ಕಲ್ಯಾಣಾಧಿಕಾರಿಗಳಾದ ಕೆ. ಮಹಾಂತೇಶ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲೆಯ ತಾಲೂಕು ಪಂಚಾಯತಿ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಮ್.ಆರ್.ಡಬ್ಲ್ಯೂಗಳಾದ ಖಾಜಾಹುಸೇನ್ ಕಾತರಕಿ,

▶▶3ನೇ ಪುಟಕ್ಕೆ

### ಪೊಲೀಸರ ಯಶಸ್ವಿ ಕಾರ್ಯಾಚರಣೆ | ಮೋಸ, ವಂಚನೆ, ಕಳ್ಳತನ ಪ್ರಕರಣಗಳ ಪತ್ತೆ ಕಾರ್ಯ ಯಶಸ್ವಿ

# ವಾರಸುದಾರರಿಗೆ ನಗದು ಹಣ ಹಸ್ತಾಂತರ

**■ವಿಜಯಸಾಕ್ಷಿ ಸುದ್ದಿ, ಗದಗ**

ಆಗಸ್ಟ್ 1, 2024ರಿಂದ ಜುಲೈ 31, 2025ರವರೆಗೆ ಗದಗ ಜಿಲ್ಲೆಯ ಪೊಲೀಸ್ ಠಾಣೆಗಳಲ್ಲಿ ಪತ್ತೆ ಮಾಡಲಾದ ಸ್ವತ್ತಿನ ಅಪರಾಧ ಪ್ರಕರಣಗಳು, ಮೋಸ, ವಂಚನೆ, ಕಳ್ಳತನ ಹಾಗೂ ಇತರೆ ಪ್ರಕರಣಗಳಲ್ಲಿನ ನಗದು ಹಣವನ್ನು ಮೂಲ ವಾರಸುದಾರರಿಗೆ ಸಂಬಾಪುರ ರಸ್ತೆಯಲ್ಲಿರುವ ಪೊಲೀಸ್ ಭವನದಲ್ಲಿ ಜಿಲ್ಲಾ ಪೊಲೀಸ್ ಅಧೀಕ್ಷಕ ರೋಹನ್ ಜಗದೀಶ್ ನೇತೃತ್ವದಲ್ಲಿ ಹಸ್ತಾಂತರಿಸಲಾಯಿತು.

ಈ ಸಂದರ್ಭದಲ್ಲಿ ಮಾಹಿತಿ ನೀಡಿದ ಜಿಲ್ಲಾ ಪೊಲೀಸ್ ಅಧೀಕ್ಷಕ ರೋಹನ್ ಜಗದೀಶ್, ಒಟ್ಟು 55 ಕಳ್ಳತನ ಪ್ರಕರಣಗಳನ್ನು ದಾಖಲಿಸಿಕೊಂಡು, 27 ಪ್ರಕರಣವನ್ನು ಪತ್ತೆ ಹಚ್ಚಿ 33 ಆರೋಪಿಗಳನ್ನು ಬಂಧಿಸಲಾಗಿದೆ. ಬಂಧಿತರಿಂದ 42 ಲಕ್ಷಕ್ಕೂ ಅಧಿಕ ಮೊತ್ತದ ಬಂಗಾರದ ಆಭರಣ ವಶಪಡಿಸಿಕೊಳ್ಳಲಾಗಿದೆ. ಸುಮಾರು 5 ಲಕ್ಷಕ್ಕೂ ಅಧಿಕ ಮೊತ್ತದ ಬೆಳ್ಳಿಯ ಆಭರಣಗಳನ್ನು ಪತ್ತೆಹಚ್ಚಲಾಗಿದೆ. 16 ಲಕ್ಷ ರೂ.ಗಳಿಗೂ ಅಧಿಕ ನಗದು ಕಳ್ಳತನ ಪ್ರಕರಣದಲ್ಲಿ 2,74,900 ಮೊತ್ತವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದರು.

49 ವಾಹನ ಕಳ್ಳತನ ಪ್ರಕರಣ ದಾಖಲಿಸಿಕೊಂಡು 25 ವಾಹನಗಳನ್ನು ಪತ್ತೆ ಹಚ್ಚಿ 35 ಆರೋಪಿಗಳನ್ನು



ವಶಕ್ಕೆ ಪಡೆಯಲಾಗಿದೆ. ಮೋಸ, ವಂಚನೆಯ 21 ಪ್ರಕರಣ ದಾಖಲಿಸಿಕೊಂಡು 9 ಪ್ರಕರಣಗಳನ್ನು ಪತ್ತೆ ಹಚ್ಚಿ 27 ಆರೋಪಿಗಳನ್ನು ಬಂಧಿಸಿ 13,90,345 ರೂ ಮೊತ್ತವನ್ನು ವಶಪಡಿಸಿಕೊಳ್ಳಲಾಗಿದೆ. ಜಿಲ್ಲೆಯಾದ್ಯಂತ 1,137 ಮೊಬೈಲ್ ಕಳ್ಳತನ ಪ್ರಕರಣ ದಾಖಲಿಸಿಕೊಂಡು 41,55,000 ರೂ ಮೊತ್ತದ 277 ಮೊಬೈಲ್ ಫೋನ್‌ಗಳನ್ನು

> ಬಡವರು ಜೀವನ ಪರ್ಯಂತ ದುಡಿದು ಸಂಪಾದಿಸಿದ ಆಭರಣಗಳನ್ನು ಕಿಡಿಗೇಡಿಗಳು ಕದ್ದಿರುತ್ತಾರೆ. ಇಂತಹ ಪ್ರಕರಣಗಳನ್ನು ಪತ್ತೆ ಹಚ್ಚಲು ಪೊಲೀಸರು ಹಗಲು-ರಾತ್ರಿ ಶ್ರಮಿಸಿದ್ದಾರೆ. ಆರೋಪಿಗಳು ಎಲ್ಲಿಗೆ ಹೋಗುತ್ತಾರೆ, ಯಾರ ಜೊತೆ ಸಂಬಂಧ ಇಟ್ಟುಕೊಂಡಿದ್ದಾರೆ ಎನ್ನುವ ಮಾಹಿತಿ ಕಲೆ ಹಾಕಿ ಹೊರ ರಾಜ್ಯಗಳಿಂದ ಆರೋಪಿಗಳನ್ನು ಬಂಧಿಸಿ ತರಲಾಗಿದೆ. ಜೊತೆಗೆ ಬೇರೆ ಜಿಲ್ಲೆಯಲ್ಲಿ ಕಳ್ಳತನವಾದ ವಾಹನಗಳನ್ನೂ ವಶಪಡಿಸಿಕೊಂಡಿದ್ದೇವೆ.
>
> **– ರೋಹನ್ ಜಗದೀಶ್.**
> ಜಿಲ್ಲಾ ಪೊಲೀಸ್ ಅಧೀಕ್ಷಕರು.

ಜಪ್ತಿ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

ಒಂದು ವರ್ಷದಿಂದ ಕಳ್ಳತನ, ಸುಲಿಗೆ, ವಂಚನೆ ಪ್ರಕರಣಗಳನ್ನು ಅಚ್ಚುಕಟ್ಟಾಗಿ ನಿಭಾಯಿಸಿ ಪತ್ತೆ ಹಚ್ಚಿದ್ದೇವೆ. ಪತ್ತೆ ಕಾರ್ಯಕ್ಕೆ ಸಾಕಷ್ಟು ಶ್ರಮ ವಹಿಸಲಾಗಿದೆ. ದಾಖಲಾದ ಒಟ್ಟೂ ಪ್ರಕರಣಗಳಲ್ಲಿ ಶೇ. 70ರಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ. ಸುಲಿಗೆ ಪ್ರಕರಣಗಳನ್ನು ಶೇ. 80ರಷ್ಟು ಪತ್ತೆ ಹಚ್ಚಲಾಗಿದೆ. ಪೊಲೀಸ್ ಸಿಬ್ಬಂದಿಗಳು ಅಚ್ಚುಕಟ್ಟಾಗಿ ಕೆಲಸ ಮಾಡಿದ್ದಾರೆ ಎಂದು ಹೇಳಿದರು.

## ಪುರಸಭೆ ಸದಸ್ಯ ಸ್ಥಾನಕ್ಕೆ ಜಿಡ್ಡಿಬಾಗಿಲ ರಾಜೀನಾಮೆ



**■ವಿಜಯಸಾಕ್ಷಿ ಸುದ್ದಿ, ರೋಣ**

ಪಟ್ಟಣದ 10ನೇ ವಾರ್ಡ್‌ಗೆ ಬಿಜೆಪಿಯಿಂದ ಆಯ್ಕೆಯಾಗಿದ್ದ ಸಂಗಪ್ಪ ಜಿಡ್ಡಿಬಾಗಿಲ ತಮ್ಮ ಸದಸ್ಯ ಸ್ಥಾನಕ್ಕೆ ರಾಜೀನಾಮೆ ನೀಡಿ ಅಚ್ಚರಿ ಮೂಡಿಸಿದ್ದಾರೆ.

ಜಿಲ್ಲಾ ಉಪವಿಭಾಗಾಧಿಕಾರಿ ಕಚೇರಿಗೆ ತೆರಳಿ ಅಧಿಕಾರಿ ಗಂಗಪ್ಪ ಎಂ.ರವರಿಗೆ ತಮ್ಮ ಸದಸ್ಯ ಸ್ಥಾನಕ್ಕೆ ರಾಜಿನಾಮೆ ನೀಡಿರುವುದು ಬಹಿರಂಗಗೊಂಡಿದೆ.

ಈ ಕುರಿತು ಮಾತನಾಡಿದ ಸದಸ್ಯ ಸಂಗಪ್ಪ ಜಿಡ್ಡಿಬಾಗಿಲ, ಬಿಜೆಪಿ ಪಕ್ಷದಲ್ಲಿ ವಾತವರಣ ಸರಿಯಿಲ್ಲ. ಅಲ್ಲಿ ಉಸಿರುಗಟ್ಟುವ ವಾತವರಣ ನಿರ್ಮಾಣಗೊಂಡಿದ್ದು, ಪಕ್ಷದ ನಿಷ್ಠಾವಂತ ಕಾರ್ಯಕರ್ತರಿಗೆ ಬೆಲೆ ಇಲ್ಲದಂತಾಗಿದೆ. ಈ ಹಿನ್ನೆಲೆಯಲ್ಲಿ ಪುರಸಭೆ ಸ್ಥಾನಕ್ಕೆ ರಾಜೀನಾಮೆ ನೀಡಿದ್ದೇನೆ. ಇನ್ನು ಕೆಲ ದಿನಗಳಲ್ಲಿ ನೂರಾರು ಬೆಂಬಲಿಗರೊಂದಿಗೆ ರಾಜ್ಯ ಕಂಡ ಅಪ್ರತಿಮ ನಾಯಕರು, ರೋಣ ಮತಕ್ಷೇತ್ರದ ಶಾಸಕರಾದ ಜಿ.ಎಸ್. ಪಾಟೀಲರ ಸಮ್ಮುಖದಲ್ಲಿ ಕಾಂಗ್ರೆಸ್ ಸೇರ್ಪಡೆಗೊಳ್ಳುವ ಮೂಲಕ ಪಟ್ಟಣದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಮತ್ತಷ್ಟು ಶಕ್ತಿ ತುಂಬಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

### ರೋಣ ಪಟ್ಟಣದಲ್ಲಿ ಹೆಚ್ಚಿದ ಸರಣಿ ಕಳ್ಳತನ ಪ್ರಕರಣ | ಬೀಗ ಹಾಕಿರುವ ಮನೆಗಳೇ ಟಾರ್ಗೆಟ್

# ಒಂದೇ ರಾತ್ರಿ 6 ಮನೆಗಳಿಗೆ ಕನ್ನ!

**■ವಿಜಯಸಾಕ್ಷಿ ಸುದ್ದಿ, ರೋಣ**

ಪಟ್ಟಣದಲ್ಲಿ ಇತ್ತೀಚೆಗೆ ಸರಣಿ ಕಳ್ಳತನ ಪ್ರಕರಣಗಳು ಹೆಚ್ಚಾಗುತ್ತಿದ್ದು, ಗುರುವಾರ ರಾತ್ರಿ ಒಂದೇ ದಿನ 6 ಮನೆಗಳ ಕಳ್ಳತನ ನಡೆದಿರುವುದು ನಗರದ ಜನರಲ್ಲಿ ಭೀತಿ ಮೂಡಿಸಿದೆ.

ಪಟ್ಟಣದ ಮುಗುಳಿ ರಸ್ತೆಗೆ ಹೊಂದಿಕೊಂಡಿರುವ ಕಾಲೋನಿಯಲ್ಲಿ ಸರಣಿ ಕಳ್ಳತನ ನಡೆದಿದೆ. ಕಳೆದ 3–4 ತಿಂಗಳುಗಳ ಹಿಂದೆ ಪಟ್ಟಣದಲ್ಲಿ ಇದೇ ರೀತಿ ಸರಣಿ ಕಳ್ಳತನ ನಡೆದಿತ್ತು. ಇದೀಗ ಮತ್ತೆ 6 ಮನೆಗಳಿಗೆ ನುಗ್ಗಿದ ಮುಸುಕುಧಾರಿ ಕಳ್ಳರು 4 ಮನೆಗಳಲ್ಲಿ ಹಣ, ಬೆಳ್ಳಿ-ಬಂಗಾರದ ಆಭರಣಗಳನ್ನು ದೋಚಿ ಪರಾರಿಯಾಗಿದ್ದಾರೆ. ಅಮಿನಸಾಬ ಜಾಲಿಹಾಳ, ವ್ಹಿ.ಎ. ಗಡಗಿ ಎಂಬುವರ ಮನೆಗಳಲ್ಲಿ ಹಾಗೂ ಅಂಗನವಾಡಿ



ಕೇಂದ್ರದಲ್ಲಿ ಕಳುವಿನ ಯತ್ನ ನಡೆದಿದೆಯಾದರೂ, ಯಾವುದೇ ವಸ್ತುಗಳು ಕಳ್ಳತನವಾಗಿಲ್ಲ.

ಗುರುವಾರ ಮಧ್ಯ ರಾತ್ರಿ ಸರಣಿ ಕಳ್ಳತನ ನಡೆದಿದ್ದು, ವ್ಹಿ.ಡಿ. ನವಲಗುಂದ ಎನ್ನುವರ ಮನೆಯಲ್ಲಿ 70 ಸಾವಿರ ರೂ ಮೌಲ್ಯದ ಬೆಳ್ಳಿ ಸಾಮಾಗ್ರಿಗಳು, ಜಾನಪ್ಪ ಹಾವನಗೌಡ್ರ ಎಂಬುವರ ಮನೆಯಲ್ಲಿ 40 ಸಾವಿರ ರೂ ನಗದು, ತನ್ವೀರ ಚಿನ್ನೂರ ಎಂಬುವರ ಮನೆಯಲ್ಲಿ 70 ಸಾವಿರ ರೂ ನಗದು ಹಾಗೂ ಅರ್ಧ ತೊಲೆ ಒಡವೆಗಳನ್ನು ದೋಚಿದ್ದಾರೆ. ಬಾಡಿಗೆ ಮನೆಯೊಂದರಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಅಂಗನವಾಡಿ ಕೇಂದ್ರವನ್ನೂ ಕಳ್ಳರು ಮನೆಯಂದು ತಿಳಿದು ಕಳ್ಳತನಕ್ಕೆ ಪ್ರಯತ್ನಪಟ್ಟಿದ್ದಾರೆ.

ಕಳ್ಳತನವಾಗಿರುವ ಮನೆಗಳ ಮಾಲಿಕರು ಮನೆಗಳಿಗೆ ಬೀಗ ಹಾಕಿ ಬೇರೆ ಕಡೆಗೆ ಹೋಗಿರುವುದನ್ನು ತಿಳಿದು ಅದೇ ಮನೆಗಳಿಗೆ ಕನ್ನ ಹಾಕಿರುವುದು ಸ್ಪಷ್ಟವಾಗಿ ಕಂಡು ಬರುತ್ತಿದೆ. ಗುರುವಾರ ಮಧ್ಯಾಹ್ನ ಅಪರಿಚಿತ ಮಹಿಳೆಯೊಬ್ಬಳು ಮನೆಗೆಲಸ ಇದೆಯಾ ಎಂದು ಕೇಳಿಕೊಂಡು ಹೋಗಿದ್ದಾಳೆ ಎನ್ನಲಾಗಿದ್ದು, ರೋಣದಲ್ಲಿ ಕಳ್ಳರ ತಂಡವೇ ಬೀಡುಬಿಟ್ಟಿರುವ ಸಂಶಯ ಮೂಡಿಸಿದೆ.

> ಈ ಸರಣಿ ಕಳ್ಳತನ ಪ್ರಕರಣವನ್ನು ಅತ್ಯಂತ ಗಂಭೀರವಾಗಿ ತೆಗೆದುಕೊಂಡಿದ್ದು, ವಿಶೇಷ ತಂಡವನ್ನು ರಚಿಸಿ ಶೀಘ್ರವೇ ಪ್ರಕರಣವನ್ನು ಭೇದಿಸಲಾಗುವುದು. ಲಕ್ಷಾಂತರ ರೂ ಖರ್ಚು ಮಾಡಿ ಮನೆ ಕಟ್ಟಿಸುವ ಮಾಲಿಕರು, 4–5 ಸಾವಿರ ಖರ್ಚು ಮಾಡಿ ಸಿಸಿ ಕ್ಯಾಮರಾ ಹಾಕಿಸಬೇಕು. ಮುಖ್ಯವಾಗಿ ಮನೆಗಳಿಗೆ ಬೀಗ ಹಾಕಿ ಬೇರೆ ಕಡೆಗಳಿಗೆ ತೆರಳುವ ಸಂದರ್ಭದಲ್ಲಿ ಪೊಲೀಸರಿಗೆ ಮಾಹಿತಿ ನೀಡಬೇಕು. ಇದರಿಂದ ಇಂತಹ ಪ್ರಕರಣಗಳನ್ನು ತಪ್ಪಿಸಬಹುದು.
>
> **– ಪ್ರಭುಗೌಡ ಕಿರೇದಹಳ್ಳಿ.**
> ಡಿವಾಯ್‌ಎಸ್ಪಿ.

> ಮನೆ ಮಾಲಿಕರು ದೂರದ ಊರುಗಳಿಗೆ ಹೋಗುವ ಸಂದರ್ಭದಲ್ಲಿ ಠಾಣೆಗೆ ಮಾಹಿತಿ ನೀಡಿದರೆ ನಮ್ಮಲ್ಲಿರುವ ಸಿಸಿ ಕ್ಯಾಮರಾಗಳನ್ನು ಮನೆಯ ಬಳಿ ಅಳವಡಿಸುತ್ತೇವೆ. ಇಂತಹ ಸಂದರ್ಭದಲ್ಲಿ ನಾಗರಿಕ ಸಮುದಾಯದ ಸಹಕಾರ ನಮಗೆ ಅತ್ಯಗತ್ಯ.
>
> – ಎಸ್.ಎಸ್. ಬಿಳಗಿ.
> ಸಿಪಿಐ, ರೋಣ.

ಸರಣಿ ಕಳ್ಳತನ ನಡೆದ ಸ್ಥಳಕ್ಕೆ ಭೇಟಿ ನೀಡಿದ ಪೊಲೀಸರು ಶ್ವಾನ ದಳದೊಂದಿಗೆ ಪರಿಶೀಲನೆ ನಡೆಸಿದರು. ಪೊಲೀಸ್ ಪಡೆ

▶▶3ನೇ ಪುಟಕ್ಕೆ

## ಧಾರವಾಡ ಕೃಷಿ ಮೇಳ ಸೆ.13ರಿಂದ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಸರ್ಕಾರದ ಕೃಷಿ ಹಾಗೂ ಸಂಬಂಧಿತ ಇಲಾಖೆಗಳು ಮತ್ತು ಕರ್ನಾಟಕ ಪ್ರದೇಶ ಕೃಷಿಕ ಸಮಾಜ ಬೆಂಗಳೂರು ಇವರ ಸಹಯೋಗದೊಂದಿಗೆ ಕೃಷಿ ಮೇಳ–2025 ಸೆಪ್ಟೆಂಬರ್ 13ರಿಂದ 16ರವರೆಗೆ ನಡೆಯಲಿದೆ.

ಪ್ರಮುಖ ಆಕರ್ಷಣೆಗಳಾಗಿ ಪೌಷ್ಟಿಕ ಆಹಾರ ಭದ್ರತೆಗೆ ಸಾಂಪ್ರದಾಯಿಕ ತಳಿಗಳು, ಪೌಷ್ಟಿಕ ಆಹಾರ ಭದ್ರತೆಗೆ ಮಣ್ಣು, ಆರೋಗ್ಯ ತಾಂತ್ರಿಕತೆಗಳು ವಿಶೇಷತೆಗಳು ಒಳಗೊಂಡಿವೆ.

ಸಾಂಪ್ರದಾಯಿಕ ತಳಿಗಳ ಪ್ರಾಮುಖ್ಯತೆ ಹಾಗೂ ಸಂರಕ್ಷಣೆ, ಸುಸ್ಥಿರತೆಗಾಗಿ ಪರಿಸರ ಸ್ನೇಹಿ ನೈಸರ್ಗಿಕ ಮತ್ತು ಸಾವಯವ ಕೃಷಿ, ಬೀಜ ಮೇಳ, ಕೃಷಿ ತಜ್ಞರೊಂದಿಗೆ ಸಮಾಲೋಚನೆ ಹಾಗೂ ಕೃಷಿ ನವೋದ್ಯಮಗಳು, ಸಮಗ್ರ ಬೆಳೆ ಪೋಷಕಾಂಶ ಹಾಗೂ ಪೀಡೆಗಳ ನಿರ್ವಹಣೆ, ಹಿಂಗಾರು ಬೆಳೆಗಳ ತಾಂತ್ರಿಕತೆಗಳು, ಮಳೆ ನೀರು ಕೊಯ್ಲು ಮತ್ತು ಅಂತರ್ಜಲ ಮರುಪೂರಣ, ಹೈಟೆಕ್ ತೋಟಗಾರಿಕೆ, ಫಲಪುಷ್ಪ ಪ್ರದರ್ಶನ ಹಾಗೂ ವಿಸ್ಮಯಕಾರಿ ಕೀಟ ಪ್ರಪಂಚ, ಸುಧಾರಿತ ಕೃಷಿ ಯಂತ್ರೋಪಕರಣ ಹಾಗೂ ಕಿಸಾನ್ ಡ್ರೋನ್ ಬಳಕೆ, ರೈತರ ಆವಿಷ್ಕಾರಗಳು ವಿಶೇಷ ಸಾಧನೆಗೈದ ರೈತ ಮತ್ತು ರೈತ ಮಹಿಳೆಯರೊಂದಿಗೆ ಸಂವಾದ, ಕೃಷಿ ಅರಣ್ಯ, ಪಶು ಸಂಗೋಪನೆ, ಜಾನುವಾರುಗಳ ಪ್ರದರ್ಶನ ಹಾಗೂ ಮೇವಿನ ಬೆಳೆಗಳ ತಾಂತ್ರಿಕತೆ, ಮಹಿಳೆಯರ ಸಬಲೀಕರಣಕ್ಕೆ ಸಮುದಾಯ ವಿಜ್ಞಾನ ತಾಂತ್ರಿಕತೆಗಳು, ಡಾ. ಚನ್ನವೀರ ಕಣವಿ ಅತ್ಯುತ್ತಮ ಕನ್ನಡ ಕೃಷಿ ಲೇಖನ ಪ್ರಶಸ್ತಿ ಮತ್ತು ಕೃಷಿ ಗೋಷ್ಠಿ, ಮಹಿಳೆಯರು ಮತ್ತು ಮಕ್ಕಳಿಗಾಗಿ ಕೃಷಿ ವಿಜ್ಞಾನ ಕೇಂದ್ರಗಳ ಮೂಲಕ ವಿವಿಧ ಸ್ಪರ್ಧೆಗಳು ನಡೆಯಲಿವೆ ಎಂದು ವಸ್ತು ಪ್ರದರ್ಶನ ಸಮಿತಿ ಅಧ್ಯಕ್ಷರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ–ಅಧ್ಯಕ್ಷರು, ವಸ್ತು ಪ್ರದರ್ಶನ ಸಮಿತಿ–ಮೊಬೈಲ್ ಸಂಖ್ಯೆ: 8277478507, 08362214497, ಮಳಿಗೆ ಕಾಯ್ದಿರಿಸಲು ಜಾಲತಾಣ ತಿತಿತಿ.ಣಭಿಜ.ಜಜಣ ಸಂಪರ್ಕಿಸಲು ಕೋರಲಾಗಿದೆ.




### ಶ್ರೀಕ್ಷೇತ್ರ ಧರ್ಮಸ್ಥಳದ ಮೇಲಿನ ಅಪಪ್ರಚಾರವನ್ನು ಖಂಡಿಸಿ ಬಿಜೆಪಿಯಿಂದ ಪ್ರತಿಭಟನೆ

# ಧರ್ಮದ ಉಳಿವಿಗಾಗಿ ಧರ್ಮಯುದ್ಧ



> ಹಿಂದೂಗಳ ಧಾರ್ಮಿಕ ಶ್ರದ್ಧಾ ಕೇಂದ್ರಗಳನ್ನು ಅವಮಾನಿಸುತ್ತಿರುವ ಸಮಾಜ ವಿರೋಧಿ ವ್ಯಕ್ತಿಗಳನ್ನು ಪತ್ತೆ ಹಚ್ಚಿ ಅವರನ್ನು ಶಿಕ್ಷೆಗೆ ಒಳಪಡಿಸಬೇಂದು ಒತ್ತಾಯಿಸಿ ರಾಜ್ಯಾದ್ಯಂತ ಪ್ರತಿಭಟನೆಯನ್ನು ಕೈಗೊಳ್ಳಲಾಗಿದೆ. ಕರ್ನಾಟಕದ ಕಾಂಗ್ರೆಸ್ ಸರ್ಕಾರ ಹಿಂದೂಗಳ ಭಕ್ತಿ ಭಾವನೆಗಳಿಗೆ ಧಕ್ಕೆ ತರುವ ಹುನ್ನಾರವನ್ನು ನಿರಂತರವಾಗಿ ಮಾಡುತ್ತಾ ಬಂದಿದೆ. ಇಂತಹ ದುಷ್ಕೃತ್ಯವನ್ನು ತಡೆಯುವಲ್ಲಿ ವಿಫಲವಾಗಿರುವ ಮುಖ್ಯಮಂತ್ರಿಗಳು ಹಾಗೂ ಗೃಹಮಂತ್ರಿಗಳು ರಾಜ್ಯದ ಜನತೆಯ ಕ್ಷಮೆ ಯಾಚಿಸಬೇಕು ಎಂದು ರಾಜು ಕುರಡಗಿ ಆಗ್ರಹಿಸಿದರು.

**■ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀಕ್ಷೇತ್ರ ಧರ್ಮಸ್ಥಳದ ವಿರುದ್ಧ ನಿರಂತರ ಅಪಪ್ರಚಾರ ನಡೆಯುತ್ತಿದೆ. ಹಿಂದೂಗಳ ಆರಾಧ್ಯ ದೇವಸ್ಥಾನಗಳನ್ನು ಟಾರ್ಗೆಟ್ ಮಾಡಲಾಗುತ್ತಿದೆ. ಹೀಗಿದ್ದರೂ ಸರ್ಕಾರ ಕಣ್ಮುಚ್ಚಿ ಕುಳಿತಿದೆ. ಎಡಪಂಥೀಯರ ಮಾತನ್ನು ಕೇಳುತ್ತಾ, ಹಿಂದೂಗಳ ಧಾರ್ಮಿಕ ಭಾವನೆಗೆ ಧಕ್ಕೆ ತರುವ ಕೆಲಸವನ್ನು ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಮಾಡುತ್ತಿದೆ ಎಂದು ಆರೋಪಿಸಿ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರುಡಗಿ ನೇತೃತ್ವದಲ್ಲಿ ಶುಕ್ರವಾರ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಈ ವೇಳೆ ಮಾತನಾಡಿದ ರಾಜು ಕುರಡಗಿ, ಶ್ರೀಕ್ಷೇತ್ರ ಧರ್ಮಸ್ಥಳವು ಕೇವಲ ಕರ್ನಾಟಕವಲ್ಲದೇ ದೇಶಾದ್ಯಂತ ಕೋಟ್ಯಾಂತರ ಭಕ್ತಾಧಿಗಳನ್ನು ಹೊಂದಿದೆ. ಈ ಕ್ಷೇತ್ರಕ್ಕೆ ದಿನನಿತ್ಯ ಲಕ್ಷಾಂತರ ಭಕ್ತಾಧಿಗಳು ಆಗಮಿಸುತ್ತಾರೆ. ಹಿಂದೂಗಳಿಗೆ ಇದು ಪ್ರಮುಖ ಧಾರ್ಮಿಕ ಶ್ರದ್ಧಾ ಕೇಂದ್ರವಾಗಿದೆ. ಹಿಂದೂಗಳ ಧಾರ್ಮಿಕ ಭಾವನೆಯನ್ನು ಅವಮಾನಿಸುವ ದುರುದ್ದೇಶದಿಂದ ಕೆಲವು ಕಿಡಿಗೇಡಿಗಳು ಹಾಗೂ ಎಡಪಂಥೀಯರು ಸುಳ್ಳು ಅಪಪ್ರಚಾರ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಇದರ ಹಿಂದೆ ಹಿಂದೂಗಳ ಶ್ರದ್ಧಾ ಭಕ್ತಿಯನ್ನು ಅತ್ಯಂತ ನಿಕೃಷ್ಟವಾಗಿ ಬಿಂಬಿಸುವ ಹುನ್ನಾರವಿದೆ. ಇಂತಹ ಕಿಡಿಗೇಡಿಗಳಿಗೆ ಕುಮ್ಮಕ್ಕು ನೀಡುವ ಷಡ್ಯಂತ್ರವೂ ನಡೆದಿದೆ. ಭಾರತದ ನ್ಯಾಯ ಸಂಹಿತೆ ಅಡಿಯಲ್ಲಿ ಅನಾಮಿಕ ವ್ಯಕ್ತಿಯೊಬ್ಬ ಯಾವುದೇ ಆಧಾರಗಳಿಲ್ಲದೇ ಮಾಡಿದ ಆರೋಪಕ್ಕೆ ರಾಜ್ಯ ಸರ್ಕಾರವು ಲಕ್ಷಾಂತರ ರೂಪಾಯಿಗಳನ್ನು ವ್ಯಯಿಸಿ ಹೇಳಿದ ಕಡೆಗಳಲ್ಲೆಲ್ಲಾ ಗುಂಡಿಗಳನ್ನು ತೋಡಿದೆ. ಆದರೆ, ಈ ಅನಾಮಿಕನ ಹಿಂದಿರುವ ದುಷ್ಟ ವ್ಯಕ್ತಿಗಳು ಯಾರು ಮತ್ತು ಅವರು ಮಾಡುತ್ತಿರುವ ಸಂಚುಗಳೇನು ಎಂಬುದನ್ನು ಈವರೆಗೂ ರಾಜ್ಯದ ಜನತೆಗೆ ಕಾಂಗ್ರೆಸ್ ಸರ್ಕಾರ ತಿಳಿಸಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ನಗರಸಭೆ ಮಾಜಿ ಅಧ್ಯಕ್ಷೆ ಉಷಾ ಮಹೇಶ ದಾಸರ, ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ನಿರ್ಮಲಾ ಕೊಳ್ಳಿ, ಗದಗ-ಬೆಟಗೇರಿ ಶಹರ ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ವಿಜಯಲಕ್ಷ್ಮೀ ಮಾನ್ವಿ, ನಗರಸಭೆ ಸದಸ್ಯರಾದ ರಾಘವೇಂದ್ರ ಯಳವತ್ತಿ, ನಾಗರಾಜ ತಳವಾರ, ಅನಿಲ ಅಬ್ಬಿಗೇರಿ, ಮುತ್ತಣ್ಣ ಮುಶಿಗೇರಿ ಸೇರಿದಂತೆ ಬಿಜೆಪಿ ಮುಖಂಡರು ಉಪಸ್ಥಿತರಿದ್ದರು.

## ಸಂಪಾದಕೀಯ

### ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ – ರಾಜ್ಯ ಸರಕಾರದ ಮಹತ್ವದ ಹೆಜ್ಜೆ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಜಾರಿಗೊಳಿಸುವ ಮತ್ತು ನೇಮಕಾತಿ ಪ್ರಕ್ರಿಯೆಯಲ್ಲಿ ಒಂದು ಬಾರಿಗೆ ವಯೋಮಿತಿ ಸಡಿಲಗೊಳಿಸುವ ನಿರ್ಧಾರವು ಸಾಮಾಜಿಕ ನ್ಯಾಯದ ದಿಕ್ಕಿನಲ್ಲಿ ಒಂದು ದಿಟ್ಟ ಹೆಜ್ಜೆಯಾಗಿದೆ.

ಪರಿಶಿಷ್ಟ ಜಾತಿಗಳು ಏಕರೂಪದ ಸಮುದಾಯಗಳಲ್ಲ. ಅವುಗಳಲ್ಲಿ ಹಲವು ಉಪಜಾತಿಗಳಿದ್ದು, ಎಲ್ಲವೂ ಒಂದೇ ರೀತಿ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಪ್ರಗತಿಯನ್ನು ಸಾಧಿಸಿಲ್ಲ. ಪರಿಶಿಷ್ಟ ಜಾತಿಗಳಿಗೆ ಇರುವ ಮೀಸಲಾತಿಯ ಪ್ರಯೋಜನವು ಈಗಾಗಲೇ ಪ್ರಗತಿ ಸಾಧಿಸಿರುವ ಕೆಲವು ಸಮುದಾಯಗಳಿಗೆ ಮಾತ್ರ ಸೀಮಿತವಾಗಿತ್ತು. ಇದರಿಂದಾಗಿ, ಹಿಂದುಳಿದ ಮತ್ತು ಅತಿ ಹಿಂದುಳಿದ ಉಪಜಾತಿಗಳು ಮೀಸಲಾತಿಯ ನಿಜವಾದ ಫಲದಿಂದ ವಂಚಿತವಾಗಿದ್ದವು.

ಒಳ ಮೀಸಲಾತಿ ಜಾರಿಯಿಂದಾಗಿ, ಅತಿ ಹಿಂದುಳಿದ ಉಪಜಾತಿಗಳಾದ ಮಾದಿಗ, ಹೊಲೆಯ, ಭೋವಿ, ಲಂಬಾಣಿ ಮುಂತಾದ ಸಮುದಾಯಗಳಿಗೆ ನೇಮಕಾತಿ ಮತ್ತು ಶಿಕ್ಷಣದಲ್ಲಿ ಹೆಚ್ಚಿನ ಅವಕಾಶಗಳು ಸಿಗಲಿವೆ. ಇದು ಕೇವಲ ರಾಜಕೀಯ ನಿರ್ಧಾರವಲ್ಲ, ಬದಲಾಗಿ ಸಂವಿಧಾನದ ಆಶಯವಾದ ಸಾಮಾಜಿಕ ಸಮಾನತೆ ಮತ್ತು ನ್ಯಾಯದ ತತ್ವಕ್ಕೆ ಬದ್ಧವಾಗಿರುವ ಒಂದು ಹೆಜ್ಜೆ.

ಅದೇ ಸಮಯದಲ್ಲಿ, ಒಂದು ಬಾರಿಗೆ ವಯೋಮಿತಿ ಸಡಿಲಗೊಳಿಸುವ ನಿರ್ಧಾರವು ಅರ್ಹ ಅಭ್ಯರ್ಥಿಗಳಿಗೆ ನ್ಯಾಯಯುತ ಅವಕಾಶ ಒದಗಿಸುತ್ತದೆ. ಈ ಬೇಡಿಕೆ ಈಡೇರುವಲ್ಲಿನ ವಿಳಂಬದಿಂದಾಗಿ ಅನೇಕರು ವಯೋಮಿತಿಯ ಗಡಿ ದಾಟಿ ನೇಮಕಾತಿ ಪ್ರಕ್ರಿಯೆಗಳಲ್ಲಿ ಭಾಗವಹಿಸುವ ಅವಕಾಶ ಕಳೆದುಕೊಂಡಿದ್ದರು.

ಈ ನಿರ್ಧಾರವನ್ನು ಕಾರ್ಯಗತಗೊಳಿಸುವಾಗ, ಯಾವುದೇ ಗೊಂದಲಗಳಿಗೆ ಅವಕಾಶವಿಲ್ಲದಂತೆ ಸ್ಪಷ್ಟವಾದ ಮಾರ್ಗಸೂಚಿಗಳನ್ನು ರೂಪಿಸುವುದು ಅತ್ಯಗತ್ಯ. ಈ ಮಹತ್ವದ ಹೆಜ್ಜೆ, ಕರ್ನಾಟಕದ ಸಾಮಾಜಿಕ ನ್ಯಾಯದ ಇತಿಹಾಸದಲ್ಲಿ ಒಂದು ಹೊಸ ಅಧ್ಯಾಯವನ್ನು ತೆರೆಯಲಿದೆ. ಇದು ಕೇವಲ ಆದೇಶವಾಗಿ ಉಳಿಯದೇ, ಅದರ ನಿಜವಾದ ಪ್ರಯೋಜನ ಹಿಂದುಳಿದವರಿಗೆ ತಲುಪುವಂತೆ ನೋಡಿಕೊಳ್ಳುವುದು ಸರ್ಕಾರದ ಮುಂದಿನ ಸವಾಲಾಗಿದೆ.

### ಗೌರಿ-ಗಣೇಶ, ಈದ್ ಮಿಲಾದ್ ಹಬ್ಬಗಳ ನಿಮಿತ್ತ ನಡೆದ ಶಾಂತಿ ಸಭೆಯಲ್ಲಿ ಎಸ್‌ಪಿ ಅರುಣಾಂಗ್ಶುಗಿರಿ

# ಸಾಮಾಜಿಕ ಶಾಂತಿ ಕದಡುವ ಕೆಲಸವಾಗಬಾರದು



■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಸಮಾಜದಲ್ಲಿ ಶಾಂತಿಯನ್ನು ಕಾಪಾಡುವುದು ಸಮಾಜದ ಪ್ರತಿಯೊಬ್ಬ ನಾಗರಿಕನ ಕರ್ತವ್ಯ ಎಂದು ವಿಜಯನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಶುಗಿರಿ ತಿಳಿಸಿದರು.

ಅವರು ಪಟ್ಟಣದ ಪೊಲೀಸ್ ಠಾಣಾ ಆವರಣದಲ್ಲಿ ಪೊಲೀಸ್ ಇಲಾಖೆ ವತಿಯಿಂದ ಗೌರಿ-ಗಣೇಶ ಹಾಗೂ ಈದ್ ಮಿಲಾದ್ ಹಬ್ಬಗಳ ನಿಮಿತ್ತ ನಡೆದ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಾಮಾಜಿಕ ಜಾಲತಾಣಗಳ ದುರ್ಬಳಕೆ ಮಾಡಿದರೆ ಕಾನೂನು ಕ್ರಮ ತೆಗೆದುಕೊಳ್ಳುತ್ತೇವೆ. ಕೆಲವರು ಮದ್ಯಪಾನ ಮಾಡಿ ಸಮಾಜದ ಸ್ವಾಸ್ಥ್ಯ ಹಾಳುಮಾಡುವ ರೀಲ್ಸ್ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಹಾಕುತ್ತಿದ್ದು, ಈ ರೀತಿ ಮಾಡಿದರೆ ಕ್ರಮ ಖಂಡಿತ. ಮೊಬೈಲ್ ಬಳಕೆಯು ನಮ್ಮ ನಿತ್ಯದ ಬದುಕಿನಲ್ಲಿ ಹಲವಾರು ಉಪಯುಕ್ತತೆಯನ್ನು ಪಡೆದುಕೊಳ್ಳಲು ಸಹಕಾರಿಯಾಗಬೇಕೆ ಹೊರತು, ಸಾಮಾಜಿಕ ಶಾಂತಿ ಕದಡುವ ಕೆಲಸವಾಗಬಾರದು ಎಂದರು.

ಡಿವೈಎಸ್ಪಿ ವೆಂಕಟಪ್ಪ ನಾಯಕ ಮಾತನಾಡಿ, ಸರ್ಕಾರದ ಅಧಿನಿಯಮಗಳನ್ನು ಎಲ್ಲರೂ ಕಡ್ಡಾಯವಾಗಿ ಪಾಲಿಸಬೇಕು. ಗಣೇಶ ಪ್ರತಿಷ್ಠಾಪನೆ ಮಾಡುವ ಸಮಿತಿಯವರು ಕಡ್ಡಾಯವಾಗಿ 4 ಜನ ಸ್ವಯಂ ಸೇವಕರನ್ನು ನಿಯೋಜನೆಗೊಳಿಸಬೇಕು ಮತ್ತು ಪ್ರತಿಷ್ಠಾಪನೆಗೂ ಮುನ್ನ ಗ್ರಾಮೀಣ ಪ್ರದೇಶಗಳಲ್ಲಿ ಗ್ರಾಮ ಪಂಚಾಯಿತಿಯ ವತಿಯಿಂದ, ಪಟ್ಟಣದವರು ಪುರಸಭೆ ಮುಖ್ಯಾಧಿಕಾರಿಗಳಿಂದ ಅನುಮತಿ ಪಡೆಯುವುದು ಕಡ್ಡಾಯವಾಗಿರುತ್ತದೆ ಎಂದರು. ತಹಶೀಲ್ದಾರ ಬಿ.ವಿ. ಗಿರೀಶಬಾಬು ಮಾತನಾಡಿ, ನಮ್ಮ ಸಂಸ್ಕಾರ, ಸಂಸ್ಕೃತಿ ಉಳಿಸಿಕೊಂಡು ಹಬ್ಬ ಆಚರಿಸಬೇಕು. ಯಾವುದೇ ಅಹಿತಕರ ಘಟನೆಯಾಗದಂತೆ ಹಬ್ಬ ಆಚರಿಸಿ ಎಂದು ಹೇಳಿದರು.

ತಾ.ಪಂ ಇಒ ಚಂದ್ರಶೇಖರ ಮಾತನಾಡಿ, ಗ್ರಾಮ ಪಂಚಾಯಿತಿಗೆ ತೆರಿಗೆ ಪಾವತಿಸಿ ನಿಗದಿತ ಸಾರ್ವಜನಿಕ ಸ್ಥಳದಲ್ಲಿ ಬ್ಯಾನರ್, ಫ್ಲೆಕ್ಸ್ ಅಳವಡಿಸಿ ಎಂದು ಸಲಹೆ ನೀಡಿದರು.

ಪುರಸಭೆ ಮುಖ್ಯಾಧಿಕಾರಿ ರೇಣುಕಾ ಎಸ್.ದೇಸಾಯಿ ಮಾತನಾಡಿ, ಷರತ್ತಿಗೆ ಒಳಪಡಿಸಿ ಗಣೇಶ ಮೂರ್ತಿ ಸ್ಥಾಪನೆಗೆ ಅನುಮತಿ ನೀಡುತ್ತೇವೆ. ಹಬ್ಬಗಳನ್ನು ಶಾಂತಿಯಿಂದ ಆಚರಿಸಿ ಎಂದರು. ವಿಶ್ವ ಹಿಂದೂ ಪರಿಷತ್ತು ಮುಖಂಡ ಎಚ್.ಎಂ.ಜಗದೀಶ ಮಾತನಾಡಿ, ಪಟ್ಟಣದಲ್ಲಿ ವಿಎಚ್‌ಪಿ, ಬಜರಂಗದಳದ ವತಿಯಿಂದ 11 ದಿವಸ ಗಣೇಶನನ್ನು ಪ್ರತಿಷ್ಠಾಪಿಸಲಾಗುತ್ತದೆ. ಹೊಸಪೇಟೆ ರಸ್ತೆಯಲ್ಲಿ ಲೈಟಿಂಗ್ ಹಾಕಲು ವ್ಯವಸ್ಥೆ ಮಾಡಿಕೊಡಬೇಕು ಎಂದು ಕೋರಿದರು. ಅರಸೀಕೆರೆ ಸಲಾಂ ಸಾಹೇಬ್ ಮಾತನಾಡಿ, ಅನ್ಯ ಧರ್ಮೀಯರನ್ನು ಗೌರವಿಸಿದರೆ ನಮ್ಮ ಧರ್ಮಕ್ಕೆ ಗೌರವ ಬರುತ್ತದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಎಲ್ಲಾ ವರ್ಗದವರೂ ಒಂದೇ. ನಾವೆಲ್ಲರೂ ಒಗ್ಗಟ್ಟಿನಿಂದ ಶಾಂತಿ, ಸಂಭ್ರಮದಿಂದ ಹಬ್ಬಗಳನ್ನು ಆಚರಿಸಿ ಸಮಾಜಕ್ಕೆ ಉತ್ತಮ ಸಂದೇಶ ಕೊಡೋಣ ಎಂದು ನುಡಿದರು.

ಅಂಜುಮನ್ ಮಾಜಿ ಅಧ್ಯಕ್ಷ ಎಂ.ಜಾವೇದ್, ಕುಂಚೂರು ಇಬ್ರಾಹಿಂ ಮಾತನಾಡಿದರು. ಸಿಪಿಐ ಮಹಾಂತೇಶ ಸಜ್ಜನ್, ಪಿಎಸ್‌ಐಗಳಾದ ಶಂಭುಲಿಂಗ ಹಿರೇಮಠ, ಕಿರಣ್ ಕುಮಾರ, ವಿಜಯಕೃಷ್ಣ, ನಾಗರತ್ನಮ್ಮ, ಅಗ್ನಿಶಾಮಕ ದಳದ ಅಧಿಕಾರಿ ನರಸಪ್ಪ ಉಪಸ್ಥಿತರಿದ್ದರು.

ಡಿವೈಎಸ್ಪಿ ವೆಂಕಟಪ್ಪ ನಾಯಕ ಮಾತನಾಡಿ, ಫ್ಲೆಕ್ಸ್ ಹಾಕುವವರು ಕಡ್ಡಾಯವಾಗಿ ಅನುಮತಿ ಪಡೆಯಬೇಕು. ಯಾವುದೇ ಅಹಿತಕರ ಘಟನೆಗಳಿಗೆ ಕಾರಣರಾದವರ ವಿರುದ್ಧ ಕಠಿಣ ಕ್ರಮ ಜರುಗಿಸಲು ಮತ್ತು ಸುಲಭವಾಗಿ ಪತ್ತೆ ಹಚ್ಚಲು ತಾಲೂಕಿನಲ್ಲಿ ಒಟ್ಟಾರೆ 2190 ಸಿಸಿ ಟಿವಿ ಅಳವಡಿಸಲಾಗಿದೆ. ಸುಪ್ರೀಂ ಕೋರ್ಟ್ ಆದೇಶದಂತೆ ಗಣೇಶ ವಿಸರ್ಜನೆಯನ್ನು ರಾತ್ರಿ 10 ಗಂಟೆಯ ಒಳಗಡೆ ಮಾಡಬೇಕು, ದ್ವನಿವರ್ಧಕಗಳಿಗೆ ಅನುಮತಿ ಪಡೆಯಬೇಕು ಎಂದರು.

# ಬೆಳೆವಿಮೆಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರವಾಹ, ಅತಿವೃಷ್ಟಿ, ಹೆಚ್ಚುವರಿ ಮಳೆಯಿಂದ ಬೆಳೆ ವಿಮೆಗೆ ನೋಂದಾಯಿಸಿದ ಬೆಳೆ ಹಾನಿ ಉಂಟಾದಾಗ ನೋಂದಾಯಿಸಿರುವ ರೈತರಿಗೆ ಸೂಕ್ತ ಪರಿಹಾರವನ್ನು ವಿಮಾ ಕಂಪನಿಗಳಿಂದ ಇತ್ಯರ್ಥಪಡಿಸುವ ಅವಕಾಶವಿದೆ.

ಸದ್ಯ ಗದಗ ತಾಲೂಕಿನಾದ್ಯಂತ ಅಕಾಲಿಕ ಹೆಚ್ಚುವರಿ ಮಳೆಯಾಗುತ್ತಿದ್ದು, ವಿವಿಧ ಬೆಳೆಗಳು ಹಾನಿಯಾಗಿರುವ ಸಂಭವವಿದೆ. ಅತಿವೃಷ್ಟಿ, ಹೆಚ್ಚುವರಿ ಮಳೆಯಿಂದ ಬೆಳೆಹಾನಿ ಆಗಿರುವ ಪ್ರದೇಶಗಳಲ್ಲಿ ಬೆಳೆ ವಿಮಾ ಯೋಜನೆಯಡಿ ನೋಂದಾಯಿಸಿದ ರೈತರು ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬೀಮಾ ಯೋಜನೆಯ KRS-PMFBY ಮಾರ್ಗಸೂಚಿ ಅನುಸಾರ ಸ್ಥಳೀಯ ಗಂಡಾಂತರ Losses under Localized Calamity ಅಡಿ ಅರ್ಜಿ ಸಲ್ಲಿಸಬಹುದಾಗಿದೆ. ರೈತರು ನೋಂದಣಿ ಸಮಯದಲ್ಲಿ ನೀಡಿದ ತಮ್ಮ ಮೊಬೈಲ್ ಸಂಖ್ಯೆ ಅಥವಾ ಬೇರೆ ಯಾವುದಾದರು ಮೊಬೈಲ್ ಸಂಖ್ಯೆಯಿಂದ ತಮ್ಮ ವಿಮಾ ನೋಂದಣಿ ಸಂಖ್ಯೆಯನ್ನು ನಮೂದಿಸಿ ಓರಿಯಂಟಲ್ ಜನರಲ್ ಇನ್ಸೂರೆನ್ಸ್ ಕಂಪನಿ ಲಿ. ಸಂಸ್ಥೆಯ ಉಚಿತ ದೂರವಾಣಿ ಸಂಖ್ಯೆ 18004256678ಗೆ ಕರೆ ಮಾಡಿ ತಮ್ಮ ಅಹವಾಲು ಸಲ್ಲಿಸಬಹುದಾಗಿದೆ. ನೋಂದಣಿಯನ್ನು ದಿನಾಂಕ 24-08-2025ರೊಳಗಾಗಿ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ವಿಮಾ ಸಂಸ್ಥೆಯ ಗದಗ ಶಾಖೆಯನ್ನು ಸಂಪರ್ಕಿಸಲು ಸಹಾಯಕ ಕೃಷಿ ನಿರ್ದೇಶಕರಾದ ಮಲ್ಲಯ್ಯ ಕೊರವನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಮಾ ಸಂಸ್ಥೆ ವಿಳಾಸ: ಓರಿಯಂಟಲ್ ಜನರಲ್ ಇನ್ಸೂರನ್ಸ್ ಕಂಪನಿ ಲಿಮಿಟೆಡ್ ಎ.ಪಿ.ಎಮ್.ಸಿ. ಯಾರ್ಡ್, ಗದಗ. ಜಿಲ್ಲಾ ಪ್ರತಿನಿಧಿ ಪ್ರಮೋದ ಕುರಿ-ಮೊ. ಸಂಖ್ಯೆ 84311 92856, ಗದಗ ತಾಲೂಕು ಪ್ರತಿನಿಧಿ ಉಮೇಶ ಹುಬ್ಬಳ್ಳಿ-ಮೊ. ಸಂಖ್ಯೆ 94820 61344 ಇವರನ್ನು ಸಂಪರ್ಕಿಸಬಹುದೆಂದು ಸಹಾಯಕ ಕೃಷಿ ನಿರ್ದೇಶಕರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಧೇಯಕಕ್ಕೆ ವಿಧಾನ ಪರಿಷತ್ತಿನಲ್ಲಿ ಅಂಗೀಕಾರ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು/ಗದಗ

ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ 2025ಕ್ಕೆ ವಿಧಾನ ಪರಿಷತ್ತಿನಲ್ಲಿ ಅಂಗೀಕಾರ ದೊರೆಯಿತು.

ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2025ನೇ ಸಾಲಿನ ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವ ರಹೀಂ ಖಾನ್ ಅವರ ಪರವಾಗಿ ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರಾದ ಹೆಚ್.ಕೆ. ಪಾಟೀಲರು ವಿಧಾನ ಪರಿಷತ್ತಿನಲ್ಲಿ ಅಂಗೀಕಾರ ಮಾಡುವಂತೆ ಪರ್ಯಾಲೋಚನೆಗೆ ಮಂಡಿಸಿದರು. ವಿಧಾನ ಪರಿಷತ್ತಿನ ಸದಸ್ಯರಾದ ಎಸ್.ವ್ಹಿ. ಸಂಕನೂರ ಅವರ ಸ್ಪಷ್ಟನೆಗಳಿಗೆ ಉತ್ತರ ನೀಡಿದ ಸಚಿವರು, ಸಭಾಪತಿಗಳನ್ನು ವಿಧೇಯಕ್ಕೆ ಅಂಗೀಕಾರ ನೀಡುವಂತೆ ಕೋರಿದರು.

# ವಚನ ಶ್ರಾವಣ ಮಂಗಲೋತ್ಸವ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಆಗಸ್ಟ್ 23ರ ಬೆಳಿಗ್ಗೆ 11ಕ್ಕೆ ವಚನ ಶ್ರಾವಣ-2025ರ ಮಂಗಲೋತ್ಸವ ಕಾರ್ಯಕ್ರಮ ಜರುಗುವುದು.

ಕಾರ್ಯಕ್ರಮದ ಸಾನ್ನಿಧ್ಯವನ್ನು ಪೂಜ್ಯ ಶ್ರೀಮನ್ನಿರಂಜನ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ತೋಂಟದಾರ್ಯ ಸಂಸ್ಥಾನಮಠ, ಡಂಬಳ-ಗದಗ ಇವರು ವಹಿಸಲಿರುವರು. ವಚನ ಚಿಂತನೆಯನ್ನು ಪ್ರೊ. ಸಿದ್ಧು ಯಾಪಲಪರವಿ, ವ್ಯವಸ್ಥಾಪಕ ನಿರ್ದೇಶಕರು, ವಚನ ಟಿ.ವಿ ಗದಗ ಇವರು ಮಾಡುವರು. ಅಧ್ಯಕ್ಷತೆಯನ್ನು ಶರಣ ವಿ.ಕೆ. ಕರೇಗೌಡ್ರ, ಅಧ್ಯಕ್ಷರು, ಬಸವದಳ, ಗದಗ-ಬೆಟಗೇರಿ ಇವರು ವಹಿಸುವರು.

ಶರಣೆ ಗಿರಿಜಕ್ಕ ಧರ್ಮರಡ್ಡಿ, ಪ್ರೊ. ಸಿದ್ಧು ಯಾಪಲಪರವಿ ಇವರುಗಳನ್ನು ಸನ್ಮಾನಿಸಲಾಗುವುದು. ಬಸವಕೇಂದ್ರ ಮತ್ತು ಜಾಗತಿಕ ಲಿಂಗಾಯತ ಮಹಾಸಭಾದ ಕೆ.ಎಸ್. ಚೆಟ್ಟಿ, ಶರಣ ಬಾಲಚಂದ್ರ ಭರಮಗೌಡ್ರ, ನಗರಸಭೆ ಸದಸ್ಯೆ, ಶರಣೆ ವಿದ್ಯಾವತಿ ಅಮರನಾಥ ಗಡಗಿ ಅತಿಥಿಗಳಾಗಿ ಆಗಮಿಸುವರು.

ಬಸವದಳ, ಬಸವಕೇಂದ್ರ ಹಾಗೂ ಲಿಂಗಾಯತ ಪ್ರಗತಿಶೀಲ ಸಂಘ, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

# ವಿವಿಧ ಯೋಜನೆಯಡಿ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದಿಂದ ನೇರ ಸಾಲ ಯೋಜನೆ, ಉದ್ಯಮಶೀಲತಾ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಮೈಕ್ರೋ ಕ್ರೆಡಿಟ್ ಯೋಜನೆ, (ಮಹಿಳಾ ಸ್ವ-ಸಹಾಯ ಸಂಘ), ಗಂಗಾ ಕಲ್ಯಾಣ ಯೋಜನೆ, ಭೂ ಒಡೆತನ ಯೋಜನೆಯಡಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ 10-09-2025ರ ಒಳಗಾಗಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಿದ ಅರ್ಜಿ ಪ್ರತಿ ಹಾಗೂ ದಾಖಲೆಗಳನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ ಗದಗ ರೂಮ್ ನಂ:122/1 ಜಿಲ್ಲಾಡಳಿತ ಭವನ, ಗದಗ ಇಲ್ಲಿಗೆ ಸಲ್ಲಿಸಲು ಕೋರಿದೆ.

# ಅರಸು ಸರಳ ವ್ಯಕ್ತಿತ್ವ ಸರ್ವರಿಗೂ ಮಾದರಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಜನಪರ ಆಡಳಿತ ನೀಡುವುದರ ಜೊತೆ-ಗೆ ತಮ್ಮ ಅಧಿಕಾರಾವಧಿಯಲ್ಲಿ ರಾಜಕೀಯ, ಆರ್ಥಿಕ ಮತ್ತು ಸಾಮಾಜಿಕ ಪರಿವರ್ತನೆಗೆ ನಾಂದಿ ಹಾಡಿ ಎಲ್ಲರಿಗೂ ಸಮಪಾಲು-ಸಮಬಾಳು ಕೊಡುಗೆ ನೀಡಿದ ಧೀಮಂತ ನಾಯಕರಾಗಿದ್ದರು ಎಂದು ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಎಂ.ಕೆ. ಸುರಕೋಡ ಹೇಳಿದರು.

ಅವರು ಶಿರಹಟ್ಟಿಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಕಚೇರಿಯ ಸಭಾಭವನದಲ್ಲಿ ಏರ್ಪಡಿಸಿದ್ದ ದಿ ಡಿ.ದೇವರಾಜ ಅರಸು ಅವರ 110ನೇ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಹಿಂದುಳಿದ ವರ್ಗಗಳ ಜೀವನ ವಿಧಾನಗಳನ್ನು ಉತ್ತಮಪಡಿಸುವ ವಚನಬದ್ಧತೆ ಹೊಂದಿದವರಾಗಿದ್ದರು. ವಿನೂತನ ಕಲ್ಪನೆಗಳನ್ನು ಸಾಕಾರಗೊಳಿಸುವುದು ಸಾಮಾಜಿಕ ಬದ್ಧತೆಗಾಗಿ ಕಾರ್ಯಪ್ರವೃತ್ತರಾಗಿ ಹೆಚ್ಚು ಜನಪರ ಯೋಜನೆಗಳನ್ನು ಜಾರಿಗೊಳಿಸಿ ಅನೇಕರಿಗೆ ಮಾದರಿಯಾಗಿದ್ದರು. ರಾಜ್ಯ ರಾಜ-ಕಾರಣ ಪ್ರವೇಶಿಸಿದ ಡಿ.ದೇವರಾಜ ಅರಸು ಸಾಮಾಜಿಕ ನ್ಯಾಯದ ಹರಿಕಾರರಾಗಿದ್ದರು. ಮೈಸೂರನ್ನು ಕರ್ನಾಟಕ ರಾಜ್ಯವನ್ನಾಗಿ ಮಾಡಿ, ಕನ್ನಡವನ್ನು ಆಡಳಿತ ಭಾಷೆಯನ್ನಾಗಿ ಅನುಷ್ಠಾನಗೊಳಿಸಿದರು. ರಾಷ್ಟ್ರ ರಾಜಕಾರಣದಲ್ಲೂ ಸಹ ತಮ್ಮ ವರ್ಚಸ್ಸನ್ನು ಮೂಡಿಸಿದ್ದರು. ಡಿ.ದೇವರಾಜ ಅರಸು ನಡೆ, ನುಡಿ, ಸರಳ ವ್ಯಕ್ತಿತ್ವ ಸರ್ವರಿಗೂ ಮಾದರಿಯಾಗಿದೆ ಎಂದರು.

ನಿಲಯ ಮೇಲ್ವಿಚಾರಕ ಎಂ.ಕೆ. ಹಿರೇಮಠ, ತಾಲೂಕಾ ವಿಸ್ತರಣಾಧಿಕಾರಿ ಬಸವರಾಜ ಹರಪನಳ್ಳಿ, ಎಸ್.ಎಸ್. ಪಾಟೀಲ, ಎಸ್.ಎಸ್. ಗುಂಜಳ, ಶಿವಣ್ಣ ಹಿರೆಣ್ಣವರ ಹಾಗೂ ವಸತಿ ನಿಲಯಗಳ ಮೇಲ್ವಿಚಾರಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



# ಅಧಿಕಾರಿಗಳು ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು ಪಟ್ಟಣಕ್ಕೆ ಗುರುವಾರ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆ ನಡೆಸಿದರು. ತಹಸೀಲ್ದಾರ ಕಚೇರಿಯಲ್ಲಿ ತಹಸೀಲ್ದಾರರು ಮತ್ತು ಅಧಿಕಾರಿಗಳೊಂದಿಗೆ ಚರ್ಚಿಸಿ ಸೂಚನೆಗಳನ್ನು ನೀಡಿದರು. ಇದೇ ವೇಳೆ ರೈತ ಸಂಘಟನೆಗಳು ಜಿಲ್ಲಾಧಿಕಾರಿಗಳಿಗೆ ಮನವಿ ಅರ್ಪಿಸಿದರು.

ನಂತರ ಪುರಸಭೆಗೆ ಆಗಮಿಸಿ ಅಧಿಕಾರಿಗಳೊಂದಿಗೆ ಚರ್ಚಿಸಿದರು. ಪುರಸಭೆ ಕಾರ್ಯಗಳು ಯಾವುದೇ ಸಮಸ್ಯೆ ಇಲ್ಲದಂತೆ ನಿರ್ವಹಿಸಿಕೊಂಡು ಹೋಗಬೇಕು. ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಬೇಕೆಂದು ತಿಳಿಸಿದರು. ನಂತರ ಅವರು ತಾಲೂಕು ಕೇಂದ್ರಕ್ಕೆ ಸರಕಾರದಿಂದ ಮಂಜೂರಿಯಾಗಿರುವ ಪ್ರಜಾಸೌಧ ನಿರ್ಮಾಣಕ್ಕೆ ಗುರುತಿಸಲಾದ ಸ್ಥಳಕ್ಕೆ ತೆರಳಿ ಅಲ್ಲಿನ ಸ್ಥಳ ಪರಿಶೀಲನೆ ಮಾಡಿದರು. ಜಾಗೆಯ ಅಳತೆಯ ಬಗ್ಗೆ ಮಾಹಿತಿ ಪಡೆದುಕೊಂಡ ಅವರು, ಅಲ್ಲಿಂದ ಶಿಗ್ಲಿ ರಸ್ತೆಯಲ್ಲಿರುವ ಆಶ್ರಯ ನಿವೇಶನಗಳ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ತಹಸೀಲ್ದಾರ ಧನಂಜಯ ಎಂ, ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ, ಉಪತಹಸೀಲ್ದಾರ ಪ್ರಶಾಂತ ಕಿಮಾಯಿ, ಕಂದಾಯ ನಿರೀಕ್ಷಕ ಎಂ.ಎ. ನಧಾಫ್, ಸಹಾಯಕ ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್, ಪುರಸಭೆ, ಕಂದಾಯ ಇಲಾಖೆ ಸಿಬ್ಬಂದಿಗಳು ಇದ್ದರು.

# ಜಿಲ್ಲಾಧಿಕಾರಿಗಳಿಗೆ ರೈತರಿಂದ ಮನವಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ತಹಸೀಲ್ದಾರ ಕಚೇರಿಗೆ ಗುರುವಾರ ದಿಢೀರ್ ಭೇಟಿ ನೀಡಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರಿಗೆ ವಿವಿಧ ರೈತ ಸಂಘಟನೆಗಳ ನೂರಾರು ರೈತರು ಮನವಿ ಸಲ್ಲಿಸಿದರು.

ಮನವಿ ಪತ್ರದಲ್ಲಿ ಲಕ್ಷ್ಮೇಶ್ವರ ತಾಲೂಕಿನಾದ್ಯಂತ ಇತ್ತೀಚೆಗೆ ಸತತವಾಗಿ ಸುರಿದ ಭಾರೀ ಮಳೆಯಿಂದ ಪ್ರಮುಖ ಬೆಳೆಗಳಾದ ಈರುಳ್ಳಿ, ಹೆಸರು, ಹತ್ತಿ, ಶೇಂಗಾ, ಗೋವಿನಜೋಳ, ಅಲಸಂದಿ ಸೋಯಾಬಿನ್, ಸೇವಂತಿ, ಚೆಂಡು ಹೂವು ಸೇರಿದಂತೆ ಬಹುತೇಕ ಬೆಳೆಗಳು ಕೊಳೆತು ಹಾಳಾಗಿವೆ. ಬಡ ರೈತರು ಸಾಲ-ಸೋಲ ಮಾಡಿ ಎಕರೆಗೆ 25ರಿಂದ 30 ಸಾವಿರ ರೂಪಾಯಿಗಳನ್ನು ಖರ್ಚು ಮಾಡಿದ್ದಾರೆ. ಆದರೆ ಅತಿಯಾದ ಮಳೆಯಿಂದ ಫಸಲು ಕೈಗೆ ಸಿಗದೆ ರೈತ ಸಮೂಹ ಕಂಗಾಲಾಗಿದ್ದಾರೆ.

ಸಂಬಂಧಪಟ್ಟ ಅಧಿಕಾರಿಗಳು ರೈತರ ಹೊಲಗಳಿಗೆ ಭೇಟಿ ನೀಡಿ ಪರಿಶೀಲಿಸಿ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಬೆಳೆ ವಿಮೆ, ಹಾಳಾದ ಬೆಳೆಗೆ ಸೂಕ್ತ ಪರಿಹಾರ ನೀಡಬೇಕು. ಜಮೀನುಗಳಿಗೆ ಹೋಗುವ ತಾಲೂಕಿನ ರಸ್ತೆಗಳು ಮತ್ತು ಲಕ್ಷ್ಮೇಶ್ವರ ಪಟ್ಟಣದ ರಸ್ತೆಗಳು ಸಂಪೂರ್ಣ ಹದಗೆಟ್ಟಿದ್ದು, ಇವುಗಳ ದುರಸ್ಥಿಗೆ ಕ್ರಮ ಕೈಗೊಳ್ಳಬೇಕೆಂದು ಮನವಿಯಲ್ಲಿ ಆಗ್ರಹಿಸಿದರು.

ಮನವಿ ಸ್ವೀಕರಿಸಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಮಾತನಾಡಿ, ರೈತರ ಸಮಸ್ಯೆಗಳ ಬಗ್ಗೆ ಚರ್ಚೆ ನಡೆಸುವ ಬಗ್ಗೆ ಅಧಿಕಾರಿಗಳಿಗೆ ಸೂಚಿಸಲಾಗುವದು. ತಾಲೂಕಿನ ಸಮಸ್ಯೆಗಳ ಬಗ್ಗೆ ತಹಸೀಲ್ದಾರರು ಅವಶ್ಯಕ ಕ್ರಮಗಳನ್ನು ಕೈಗೊಳ್ಳಬೇಕೆಂದು ತಿಳಿಸಿದರು. ಈ ಸಂದರ್ಭದಲ್ಲಿ ತಹಸೀಲ್ದಾರ ಧನಂಜಯ ಎಂ, ಭಾರತೀಯ ಕಿಸಾನ ಸಂಘದ ತಾಲೂಕಾಧ್ಯಕ್ಷ ಅಜೇಯ ಕರಿಗೌಡ್ರ, ಕಾರ್ಯದರ್ಶಿ ಲಕ್ಷ್ಮಣ ಲಮಾಣಿ, ಜಿಲ್ಲಾ ಪ್ರ.ಕಾರ್ಯದರ್ಶಿ ರಮೇಶ ಕೋಳಿವಾಡ, ಆದೇಶ ಹುಲಗೂರ, ಚಂದ್ರಗೌಡ್ರು ಕರೆಗೌಡ್ರು, ವಸಂತಗೌಡ್ರ ಕರೆಗೌಡ್ರು, ಮುತ್ತು ಅಜ್ಜಪ್ಪಶೆಟ್ಟರ, ರಮೇಶ, ಹುಲಕೋಟಿ ಮಂಜುನಾಥ ಹುಲಕೋಟಿ, ಬಸವರಾಜ ಮೂಲಿಮನಿ ಮುಂತಾದವರಿದ್ದರು.



# ಅಭಿಯಾನದ ಸದುಪಯೋಗಕ್ಕೆ ಕರೆ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸೆ. 11ರಂದು ಉಚಿತ ಕಣ್ಣಿನ ಪೊರೆಯ ಚಿಕಿತ್ಸೆ ಅಭಿಯಾನವನ್ನು ಹಮ್ಮಿಕೊಂಡಿದ್ದು, ಅಭಿಯಾನದ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕು ಎಂದು ನೇತ್ರಾಧಿಕಾರಿ ಮಂಜುನಾಥ ದೊಡ್ಡಮನಿ ಹೇಳಿದರು.

ಪಟ್ಟಣದ ನಮ್ಮ ಕ್ಲಿನಿಕ್‌ನಲ್ಲಿ ಉಚಿತ ಕಣ್ಣಿನ ಪೊರೆಯ ಚಿಕಿತ್ಸೆ ಅಭಿಯಾನದ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಿ ಅವರು ಮಾತನಾಡಿದರು.

ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆ ಎಂದರೆ ಕಣ್ಣಿನ ಮಸೂರವನ್ನು ತೆಗೆದುಹಾಕಿ ಅದರ ಬದಲಿಗೆ ಕೃತಕ ಮಸೂರವನ್ನು ಅಳವಡಿಸುವ ಒಂದು ಶಸ್ತ್ರಚಿಕಿತ್ಸಾ ವಿಧಾನವಾಗಿದೆ. ಈ ಶಸ್ತ್ರಚಿಕಿತ್ಸೆಯಿಂದ ದೃಷ್ಟಿಯನ್ನು ಸುಧಾರಿಸಬಹುದು ಮತ್ತು ದೈನಂದಿನ ಚಟುವಟಿಕೆಗಳನ್ನು ಸುಲಭವಾಗಿ ಮಾಡಬಹುದು. ಲೇಸರ್ ಬಳಸಿ ಕಣ್ಣಿನ ಪೊರೆಗೆ ನಿಖರವಾದ ಕಡಿತಗಳನ್ನು ಮಾಡಲಾಗುತ್ತದೆ ಮತ್ತು ಮಸೂರವನ್ನು ಒಡೆಯಲಾಗುತ್ತದೆ. ಶಸ್ತ್ರಚಿಕಿತ್ಸೆಯ ನಂತರ, ಕಣ್ಣುಗಳಿಗೆ ವಿಶ್ರಾಂತಿ ನೀಡುವುದು ಮುಖ್ಯ. ವೈದ್ಯರ ಸಲಹೆಯಂತೆ ಕಣ್ಣಿನ ಹನಿಗಳನ್ನು ಬಳಸಿ ಮತ್ತು ಸೂಚಿಸಿದಂತೆ ಕಣ್ಣಿನ ಆರೈಕೆಯನ್ನು ನೋಡಿಕೊಳ್ಳಿ. ಶಸ್ತ್ರಚಿಕಿತ್ಸೆಯ ನಂತರ ಯಾವುದೇ ಸಮಸ್ಯೆ ಕಂಡುಬಂದರೆ ತಕ್ಷಣ ವೈದ್ಯರನ್ನು ಸಂಪರ್ಕಿಸಿ ಎಂದರು.

ಆರೋಗ್ಯ ನಿರೀಕ್ಷಣಾಧಿಕಾರಿ ಎಂ.ಎಚ್. ಜಾಲಿಹಾಳ, ರೇಷ್ಮಾ ಓಲೇಕಾರ, ಚಂದ್ರು ಗಂಗರಗೊಂಡ, ಸಂಗೀತಾ ಮುಚಖಂಡಿ, ವಿಜಯಲಕ್ಷ್ಮೀ ಪೊಲೀಸ್‌ಪಾಟೀಲ, ಕೆ.ಎ. ಬುದಿಹಾಳ, ಎಲ್.ಟಿ. ಹೊಸಮನಿ ಮುಂತಾದವರಿದ್ದರು.

# ರಸ್ತೆ ಗುಂಡಿ ತುಂಬುವ ಕಾರ್ಯ ಆರಂಭ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ವ್ಯಾಪ್ತಿಯ ಅವಳಿ ನಗರದ 12 ವಲಯಗಳಲ್ಲಿ ಮಳೆ ಪ್ರಮಾಣ ಕಡಿಮೆಯಾಗಿರುವುದರಿಂದ ರಸ್ತೆಗಳಲ್ಲಿನ ತಗ್ಗು ಗುಂಡಿಗಳನ್ನು ವೈಟ್‌ಮಿಕ್ಸ್ ಬಳಸಿ ತುಂಬುವ ಕಾರ್ಯ ಆರಂಭವಾಗಿದೆ ಎಂದು ಮಹಾನಗರ ಪಾಲಿಕೆಯ ಆಯುಕ್ತ ಡಾ. ರುದ್ರೇಶ ಘಾಳಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ನಿರಂತರ ಮಳೆಯಿಂದಾಗಿ ಅವಳಿ ನಗರದ ಅನೇಕ ರಸ್ತೆಗಳು ಹಾಳಾಗಿವೆ. ಮುಖ್ಯವಾಗಿ ಗೌರಿ ಗಣೇಶ ಹಬ್ಬ ಬರುತ್ತಿರುವದರಿಂದ ಗಣೇಶ ಮೂರ್ತಿ ಮೆರವಣಿಗೆಯ ಮಾರ್ಗಗಳ ಪಾಟ್‌ಹೋಲ್ ತುಂಬುವ ಮೂಲಕ ಸಂಚಾರಕ್ಕೆ ಅನುವು ಮಾಡಿಕೊಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಈ ಕುರಿತು ಜಿಲ್ಲಾಧಿಕಾರಿಗಳು ಸಹ ನಿರ್ದೇಶನ ನೀಡಿದ್ದು, ಅವಳಿ ನಗರದ 12 ವಲಯ ಕಚೇರಿಯ ವ್ಯಾಪ್ತಿಯಲ್ಲಿ ಬರುವ ಸುಮಾರು 50ಕ್ಕೂ ಹೆಚ್ಚು ಮಾರ್ಗಗಳ ಸುಮಾರ 25 ಕಿ.ಮೀ. ವ್ಯಾಪ್ತಿಯ ರಸ್ತೆಯನ್ನು ತಗ್ಗು ಗುಂಡಿ ಮುಕ್ತಗೊಳಿಸಲು ಏಕಕಾಲಕ್ಕೆ ಅವಳಿನಗರದಲ್ಲಿ ಕೆಲಸ ಆರಂಭಿಸಲಾಗಿದೆ. ಮುಂದಿನ 3-4 ದಿನಗಳಲ್ಲಿ ರಸ್ತೆಗಳನ್ನು ಸಂಚಾರಯೋಗ್ಯಗೊಳಿಸಲು ಕ್ರಮವಹಿಸಲಾಗುವುದು ಎಂದು ತಿಳಿಸಿದ್ದಾರೆ.



## ರಕ್ತ ಗುಂಪು ಪರೀಕ್ಷೆ, ರಕ್ತದಾನ ಶಿಬಿರ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಲಯನ್ಸ್ ಕ್ಲಬ್, ದೈವಜ್ಞ ಸಮಾಜದ ಸಹಕಾರದೊಂದಿಗೆ ಗದುಗಿನ ಹಳೇ ಸರಾಫ್ ಬಜಾರ್‌ನಲ್ಲಿರುವ ದೈವಜ್ಞ ಸಮಾಜದ ಕಾರ್ಯಾಲಯದಲ್ಲಿ ರಕ್ತ ಗುಂಪು ತಪಾಸಣೆ ಹಾಗೂ ರಕ್ತದಾನ ಶಿಬಿರವನ್ನು ಏರ್ಪಡಿಸಲಾಗಿತ್ತು.

100ಕ್ಕೂ ಹೆಚ್ಚು ಜನರ ರಕ್ತ ತಪಾಸಣೆ ಮಾಡಲಾಯಿತು. ರಕ್ತದಾನಕ್ಕೆ ಮುಂದಾಗಿದ್ದ 20ಕ್ಕೂ ಹೆಚ್ಚು ಜನರಲ್ಲಿ ಹೆಮೋಗ್ಲೋಬಿನ್ ಕಡಿಮೆ ಇದ್ದುದರಿಂದ ಹೆಮೋಗ್ಲೋಬಿನ್ ಸುಧಾರಣೆಯ ಬಳಿಕ ಮುಂದಿನ ಶಿಬಿರದಲ್ಲಿ ರಕ್ತದಾನ ಮಾಡುವಂತೆ ಸಲಹೆ ನೀಡಲಾಯಿತು. 26 ಜನರು ರಕ್ತದಾನ ಮಾಡಿದರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಅಧ್ಯಕ್ಷ ರಾಜು ವೇರ್ಣೆಕರ, ಕಾರ್ಯದರ್ಶಿ ರಾಜಣ್ಣ ಮಲ್ಲಾಡದ, ಕೋಶಾಧ್ಯಕ್ಷ ರೇಣುಕಪ್ರಸಾದ ಹಿರೇಮಠ, ಲಯನ್ ಲೇಡಿಸ್ ಕ್ಲಬ್ ಅಧ್ಯಕ್ಷೆ ಪೂಜಾ ಪಾಟೀಲ, ಕಾರ್ಯದರ್ಶಿ ಸುರೇಖಾ ಮಲ್ಲಾಡದ, ಕೋಶಾಧ್ಯಕ್ಷೆ ಸಹನಾ ಹಿರೇಮಠ, ಅಶ್ವಥ್ ಸುಲಾಖೆ, ಜೆ.ಡಿ. ಉತ್ತರಕರ, ರಮೇಶ ಶಿಗ್ಲಿ, ಪ್ರವೀಣ ವಾರಕರ, ಎಸ್.ಕೆ. ಶೆಟ್ಟರ, ನಿತೀಶ್ ಸಾಲಿ, ಅರವಿಂದ ಪಟೇಲ್, ರಘು ಮೇಹರವಾಡೆ, ಎಸ್.ಡಿ. ಪಾಟೀಲ, ಮಂಜುನಾಥ ವೀರಲಿಂಗಯ್ಯನಮಠ, ರಾಹುಲ್ ಅರಳಿ, ರತನ್ ದೇಸಾಯಿ, ಕಾರ್ತಿಕ ಪಾಲನಕರ, ವೀರೇಶ ಪಟ್ಟಣಶೆಟ್ಟಿ, ವೀಣಾ ಸುಲಾಖೆ, ಸಾವಿತ್ರಿ ಶಿಗ್ಲಿ, ಮಧು ವೀರಲಿಂಗಯ್ಯನಮಠ, ಅಪರ್ಣಾ ತೋಟದ, ಅಮೃತಾ ವಾರಕರ, ರೂಪಾ ಉತ್ತರಕರ, ಅಶ್ವಿನಿ ನೀಲಗುಂದ ಮುಂತಾದವರು ಶಿಬಿರದ ಯಶಸ್ಸಿಗೆ ಶ್ರಮಿಸಿದರು.

### 4ನೇ ದಿನಕ್ಕೆ ಬಗರ್ ಹುಕುಂ ಸಾಗುವಳಿದಾರರ ಅಹೋರಾತ್ರಿ ಧರಣಿ

# ಇದು 'ಮಾಡು ಇಲ್ಲವೇ ಮಡಿ' ಹೋರಾಟ

**■ವಿಜಯಸಾಕ್ಷಿ ಸುದ್ದಿ, ಗದಗ**

ಉತ್ತರ ಕರ್ನಾಟಕ ಮಹಾಸಭೆಯ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಗದಗ ಜಿಲ್ಲಾಡಳಿತ ಕಚೇರಿ ಮುಂಭಾಗದಲ್ಲಿ ನಡೆಯುತ್ತಿರುವ ಬಗರ್ ಹುಕುಂ ಸಾಗುವಳಿದಾರರ ಅಹೋರಾತ್ರಿ ಧರಣಿ ಶನಿವಾರ 4ನೇ ದಿನಕ್ಕೆ ಮುಂದುವರೆದಿದೆ.

ಧರಣಿ ಸ್ಥಳದಲ್ಲಿ ಮಾತನಾಡಿದ ಉತ್ತರ ಕರ್ನಾಟಕ ಮಹಾಸಭಾದ ರಾಜ್ಯಾಧ್ಯಕ್ಷ ರವಿಕಾಂತ ಅಂಗಡಿ, ಜಿಲ್ಲಾ ಉಸ್ತುವಾರಿ ಸಚಿವರು ಸ್ಥಳಕ್ಕೆ ಬಂದು ನಮ್ಮ ಬೇಡಿಕೆಗಳನ್ನು ಈಡೇರಿಸುವವರೆಗೂ ಹೋರಾಟ ಹಿಂತೆಗೆದುಕೊಳ್ಳುವುದಿಲ್ಲ. ರೈತರು ತಲೆತಲಾಂತರಗಳಿಂದ ಅರಣ್ಯ ಜಮೀನುಗಳನ್ನು ಸಾಗುವಳಿ ಮಾಡಿಕೊಂಡು ಬದುಕು ನಡೆಸುತ್ತಿದ್ದಾರೆ. ಆದರೆ ಸರ್ಕಾರ ಹಕ್ಕುಪತ್ರ ನೀಡದೇ, ರೈತರನ್ನು ಕಿರುಕುಳಕ್ಕೆ ಒಳಪಡಿಸುತ್ತಿದೆ.



ಜೊತೆಗೆ ನಾಗಾವಿ ಗ್ರಾಮದಲ್ಲಿನ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ವಿಶ್ವವಿದ್ಯಾಲಯ ನಿರ್ಮಾಣಕ್ಕಾಗಿ ರೈತರ ಪೂರ್ವಜರ ಕಾಲದಿಂದ ಸಾಗುವಳಿ ಮಾಡುತ್ತಿದ್ದ ನೂರಾರು ಎಕರೆ ಕೃಷಿ ಭೂಮಿಯನ್ನು ಪರಿಹಾರ ನೀಡದೇ ಒಕ್ಕಲೆಬ್ಬಿಸಿರುವುದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಜಿಲ್ಲಾ ಉಸ್ತುವಾರಿ ಸಚಿವರು ನೀಡಿದ ಮಾತಿನಂತೆ ನಡೆದುಕೊಳ್ಳಬೇಕು. ಜಿಲ್ಲಾಡಳಿತ ತಕ್ಷಣವೇ ನಮ್ಮ ನ್ಯಾಯಸಮ್ಮತ ಬೇಡಿಕೆಗಳ ಈಡೇರಿಕೆಗೆ ಮುಂದಾಗಬೇಕು. ಇಲ್ಲದಿದ್ದರೆ ದಿನದಿಂದ ದಿನಕ್ಕೆ ನಮ್ಮ ಹೋರಾಟದ ರೂಪುರೇಷೆ ಬದಲಾಗುತ್ತಾ ತೀವ್ರಗೊಳ್ಳುತ್ತದೆ ಎಂದು ಎಚ್ಚರಿಸಿದರು.

ಧರಣಿಯನ್ನು ಬೆಂಬಲಿಸಿ ಜಯಕರ್ನಾಟಕ ಸಂಘಟನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ಚಂದ್ರಕಾಂತ ಚವ್ಹಾಣ ಮಾತನಾಡುತ್ತಾ, ಧರಣಿ ನಿರತರ ಬೇಡಿಕೆಗಳನ್ನು ಸರ್ಕಾರ ಕೂಡಲೇ ಈಡೇರಿಸಬೇಕು. ಅವರು ತಮ್ಮ ಹಕ್ಕಿಗಾಗಿ ಹೋರಾಟ ಮಾಡುತ್ತಿದ್ದು, ಅವರ ಬೇಡಿಕೆಗಳು ನ್ಯಾಯಸಮ್ಮತವಾದ್ದು, ಜಿಲ್ಲಾಡಳಿತ ರೈತರ ಹೋರಾಟವನ್ನು ಕಡೆಗಣಿಸಬಾರದು ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ಜೆಡಿಎಸ್ ಮುಖಂಡರಾದ ಗೋವಿಂದಗೌಡ್ರು, ಕೆಆರ್‌ಎಸ್ ಪಾರ್ಟಿಯ ಪದಾಧಿಕಾರಿಗಳು ಸೇರಿದಂತೆ ಅನೇಕ ಸಂಘಟನೆಯ ಮುಖಂಡರು ಹೋರಾಟವನ್ನು ಬೆಂಬಲಿಸಿದರು. ಈ ಸಂದರ್ಭದಲ್ಲಿ ಬಸವಣೆಪ್ಪ ಚಿಂಚಲಿ, ಎನ್.ಟಿ. ಪೂಜಾರ ಸೇರಿದಂತೆ ಜಿಲ್ಲೆಯ ಹಲವು ರೈತ ಸಂಘಟನೆಯ ಮುಖಂಡರು ಮತ್ತು ರೈತರು ಹಾಜರಿದ್ದರು.

> ಇದು 'ಮಾಡು ಇಲ್ಲವೇ ಮಡಿ' ಹೋರಾಟವಾಗಿದೆ. ಇಂದಿಗೆ ನಮ್ಮ ಹೋರಾಟ ನಾಲ್ಕನೇ ದಿನಕ್ಕೆ ಕಾಲಿಟ್ಟಿದೆ. ಜಿಲ್ಲೆಯ ಹಲವು ವಂಚಿತ ರೈತ ಕುಟುಂಬಗಳು ಮಳೆ, ಗಾಳಿ, ಚಳಿ ಲೆಕ್ಕಿಸದೆ ಹಗಲು-ರಾತ್ರಿ ಎನ್ನದೆ ಈ ಅಹೋರಾತ್ರಿ ಧರಣಿಯಲ್ಲಿ ಕುಳಿತಿದ್ದು, ಈ ಕೂಡಲೆ ಜಿಲ್ಲಾಡಳಿತ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಈ ಹೋರಾಟವನ್ನು ಗಂಭೀರವಾಗಿ ಪರಿಗಣಿಸಿ, ನೊಂದ ರೈತರ ನ್ಯಾಯಯುತ ಬೇಡಿಕೆಗಳನ್ನು ಶೀಘ್ರವೇ ಈಡೇರಿಸಬೇಕು.
>
> **– ರವಿಕಾಂತ ಅಂಗಡಿ.**
>
> ಉತ್ತರ ಕರ್ನಾಟಕ ಮಹಾಸಭಾ ರಾಜ್ಯಾಧ್ಯಕ್ಷರು.

# ತಿಂಗಳ ಪರ್ಯಂತ ಮಕ್ಕಳಿಗೆ ಸಿಹಿಯೂಟ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಪುಟಗಾವ್‌ಬಡ್ನಿ ಗ್ರಾಮದ ಸ.ಚ. ಹರದಗಟ್ಟಿ ಸರ್ಕಾರಿ ಪಬ್ಲಿಕ್ ಸ್ಕೂಲ್‌ನ ಮಕ್ಕಳಿಗೆ ಶ್ರಾವಣ ಮಾಸದಾದ್ಯಂತ ಸಿಹಿ ಭೋಜನವನ್ನು ಕಳೆದ ಅನೇಕ ವರ್ಷಗಳಿಂದ ಮಾಡಿಕೊಂಡು ಬಂದಿದ್ದು, ಅದರಂತೆ ಈ ವರ್ಷವು ಒಂದು ತಿಂಗಳ ಕಾಲ ಸಿಹಿ ಊಟ ನೀಡಲಾಗಿದ್ದು, ಶುಕ್ರವಾರ ನೂರಾರು ಮಕ್ಕಳಿಗೆ ಕಡುಬಿನ ಊಟ ಉಣಬಡಿಸಲಾಯಿತು.

ನಾಡಿನ ಹಬ್ಬಗಳು ಮತ್ತು ಅವುಗಳ ಆಚರಣೆ, ವೈಶಿಷ್ಟ್ಯದ ಕುರಿತು ಮಕ್ಕಳಲ್ಲಿ ಅರಿವು ಮೂಡಿಸುವ ಸಲುವಾಗಿ ಶಿಕ್ಷಕರು ಹಾಗೂ ಶಾಲಾ ಆಡಳಿತ ಮಂಡಳಿ ಸದಸ್ಯರ ದೂರದೃಷ್ಟಿಯ ಫಲವಾಗಿ ಮಕ್ಕಳಿಗೆ ಒಂದು ತಿಂಗಳ ಪರ್ಯಂತ ಮಧ್ಯಾಹ್ನದ ಬಿಸಿಯೂಟದೊಂದಿಗೆ ಸಿಹಿ ಬಡಿಸುವುದು ವಿಶೇಷವಾಗಿದೆ. ಮುಂಜಾನೆಯಿಂದಲೇ ಸಾವಿರಾರು ಕಡುಬುಗಳನ್ನು ತಯಾರಿಸಿದ್ದು, ಅತಿಥಿಗಳು ಮತ್ತು ನೂರಾರು ಮಕ್ಕಳು ಕಡುಬುಗಳನ್ನು ಸವಿದರು.

ನಾಗರ ಅಮವಾಸ್ಯೆಯಿಂದ ಬೆನಕನ ಅಮವಾಸ್ಯೆಯವರೆಗೆ ಶಾಲೆಯ ಮಕ್ಕಳಿಗೆ ಪ್ರತಿ ದಿನ ಮಧ್ಯಾಹ್ನ ಬಿಸಿ ಊಟದಲ್ಲಿ ನೀಡುವ ಸಿಹಿ ಊಟಕ್ಕೆ ಶಿಕ್ಷಕರು ಅಮೃತ ಭೋಜನ ಎಂದು ನಾಮಕರಣ ಮಾಡಿದ್ದಾರೆ. ಶಾಲಾ ಮಕ್ಕಳಲ್ಲಿ ನಮ್ಮ ಹಬ್ಬ, ಆಚರಣೆ, ಪರಂಪರೆಗಳ ಬಗ್ಗೆ ಅರಿವು ಮೂಡಿಸುವ ಅಗತ್ಯ ಇದೆ. ಈ ಹಿನ್ನೆಲೆಯಲ್ಲಿ ಪುಟಗಾವ್‌ಬಡ್ನಿ ಗ್ರಾಮದ ಪಬ್ಲಿಕ್ ಸ್ಕೂಲ್‌ನ ಶಿಕ್ಷಕರು, ಆಡಳಿತ ಮಂಡಳಿ ಸದಸ್ಯರು, ಗ್ರಾಮಸ್ಥರ ಸಹಕಾರದಿಂದ ತಿಂಗಳವರೆಗೆ ವಿವಿಧ ತೆರನಾದ ಸಿಹಿ ಖಾದ್ಯಗಳನ್ನು ಮಕ್ಕಳಿಗೆ ಉಣ ಬಡಿಸಿದ್ದು ವಿಶೇಷ ಎಂದು ಪಿಡಿಒ ಬಸವರಾಜ ಬಳೂಟಗಿ ತಿಳಿಸಿದರು.

2022-23ರಿಂದ ಶ್ರಾವಣ ಮಾಸದಲ್ಲಿ ಮಕ್ಕಳಿಗೆ ಸಿಹಿ ವಿತರಣೆಯ ನೂತನ ಕಾರ್ಯಕ್ರಮವನ್ನು ಆಗಿನ ಮುಖ್ಯ ಶಿಕ್ಷಕರು ಹಾಗೂ ಶಿಕ್ಷಣಾಧಿಕಾರಿಗಳ ಸಂಘದ ಅಧ್ಯಕ್ಷ ಎಂ.ಬಿ. ಹೊಸಮನಿ ಶಿಕ್ಷಣ ಪ್ರೇಮಿಗಳ ಸಹಕಾರದೊಂದಿಗೆ ಆರಂಭಿಸಿದ್ದರು.

ಅದನ್ನೇ ಈಗಲೂ ಮುಂದುವರೆಸಿಕೊಂಡು ಬರುತ್ತಿದ್ದೇವೆ ಎಂದು ಮುಖ್ಯ ಶಿಕ್ಷಕಿ ಜಯಶ್ರೀ ಹೊಸಮನಿ ಹೇಳಿದರು. ಈ ಸಂದರ್ಭದಲ್ಲಿ ಶಿವಾನಂದ ಹರಿಜನ, ಶಿವಪುತ್ರಪ್ಪ ಜಿಡ್ಡಿ, ಶ್ರೀಕಾಂತ ಚೋಟಗಲ್ಲ, ಶಿಕ್ಷಕರು ಇದ್ದರು.

### ನಾಗಪ್ಪ ಬಡಿಗೇರರ ಕೈಯಲ್ಲಿ ಅರಳುವ ಗಣಪ ಬಲು ಸುಂದರ

# ಎಲ್ಲರ ಮನಗೆದ್ದ ಕಲಾವಿದ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಗೌರಿ-ಗಣೇಶ ಹಬ್ಬದ ಹಿನ್ನೆಲೆಯಲ್ಲಿ ಸಿದ್ಧವಾಗುತ್ತಿರುವ ಗಣೇಶ ಮೂರ್ತಿಗಳಿಗೆ ಅಂತಿಮ ರೂಪ ಕೊಡುವ ಕೆಲಸ ಒಂದೆಡೆ ನಡೆದಿದ್ದರೆ, ಈಗಾಗಲೇ ಸಿದ್ಧವಾಗಿರುವ ಗಣಪತಿಗಳು ಮಾರುಕಟ್ಟೆಗೆ ಲಗ್ಗೆ ಇಡುತ್ತಿವೆ.

ಕಳೆದ ಮೂರು ದಶಕಗಳಿಂದ ಗಣಪತಿಗಳ ತಯಾರಿಕೆಯಲ್ಲಿ ಸಿದ್ಧಹಸ್ತರಾಗಿರುವವರು ಸಮೀಪದ ಕೋಟುಮಚಗಿಯ ನಾಗಪ್ಪ ಬಡಿಗೇರ. ಅವರ ಕೈಯಲ್ಲಿ ಅರಳುವ ಸುಂದರ ಗಣಪತಿಗಳಿಗೆ ಜಿಲ್ಲೆಯಾದ್ಯಂತ ಬಲು ಬೇಡಿಕೆ ಇದೆ. ಗಣೇಶ ಚತುರ್ಥಿಗೆ 3-4 ತಿಂಗಳುಗಳ ಮೊದಲೇ ಇವರು ಗಣಪತಿ ತಯಾರಿಗೆ ಸಿದ್ಧರಾಗುತ್ತಾರೆ. ಮಣ್ಣು ತರುವದರಿಂದ ಹಿಡಿದು, ಅದನ್ನು ಜರಡಿ ಹಿಡಿದು ಹದ ಮಾಡುವವರೆಗೂ ಅವರಿಗೆ ವಿಶ್ರಾಂತಿ ಎಂಬುದೇ ಇಲ್ಲ. ಮನೆಯಲ್ಲಿ ನಾಗಪ್ಪ, ತಮ್ಮ ಮಲ್ಲಪ್ಪ ಮತ್ತು ಮಗ ಓಂಕಾರ ಅಲ್ಲದೆ ಮನೆಯ ಹೆಣ್ಣು ಮಕ್ಕಳೂ ಸಹ ಈ ಕಾರ್ಯಕ್ಕೆ ಕೈಜೋಡಿಸುತ್ತಾರೆ. ಎಲ್ಲ ಮೂರ್ತಿಗಳೂ ಜೀವಕಳೆ ಮತ್ತು ದೈವಕಳೆಗಳಿಂದ ಸುಂದರವಾಗಿ ಕಂಗೊಳಿಸುವುದರಿಂದ ಗದಗ ಜಿಲ್ಲೆಯಲ್ಲದೆ ಪಕ್ಕದ ಕೊಪ್ಪಳ ಜಿಲ್ಲೆಯಲ್ಲಿಯೂ ಇವರ ಗಣಪತಿಗಳು ಪ್ರಸಿದ್ಧಿ ಪಡೆದಿವೆ.

ಒಂದು ಕಾಲದಲ್ಲಿ ಬಹು ಬೇಡಿಕೆ ಹೊಂದಿದ್ದ ಪಿಒಪಿ ಗಣಪತಿಗಳತ್ತ ಒಂದಿಷ್ಟೂ ಗಮನ ಹರಿಸದ ನಾಗಪ್ಪ, ಅವುಗಳನ್ನೂ ಮೀರಿಸುವಂತೆ ಮಣ್ಣಿನಲ್ಲಿಯೇ ಗಣಪತಿಗಳನ್ನು ತಯಾರಿಸಿ ಎಲ್ಲರ ಮನ ಗೆದ್ದಿದ್ದಾರೆ. ನಾಗಪ್ಪ ಬಡಿಗೇರರಿಂದ ಸಿದ್ಧಗೊಂಡ ಗಣಪತಿ ಮೂರ್ತಿಗಳು ನರೇಗಲ್ಲ, ಕೋಡಿಕೊಪ್ಪ, ಕೋಚಲಾಪೂರ, ಹಾಲಕೆರೆ, ನಿಡಗುಂದಿ, ನಿಡಗುಂದಿಕೊಪ್ಪ, ಜಕ್ಕಲಿ, ರೋಣ ಸೇರಿದಂತೆ ಪಕ್ಕದ ಯಲಬುರ್ಗಾ ತಾಲೂಕಿನ ಬಿನ್ನಾಳ, ತೊಂಡಿಹಾಳ ಮುಂತಾದ ಕಡೆಗಳಲ್ಲಿಯೂ ಭಾರೀ ಬೇಡಿಕೆಯನ್ನು ಹೊಂದಿವೆ.

> ಹುಬ್ಬಳ್ಳಿ ಹತ್ತಿರದ ಅಂಚಟಗೇರಿಯಿಂದ ಮಣ್ಣನ್ನು ತರುವ ನಮಗೆ ಪ್ರತಿ ವರ್ಷ ಮಣ್ಣಿನ ಬೆಲೆ ಮತ್ತು ಸಾರಿಗೆ ವೆಚ್ಚ ದುಬಾರಿಯಾಗುತ್ತಿದೆ. ತಯಾರಿಕಾ ವೆಚ್ಚವೂ ಏರುತ್ತಿದೆ. ಬಣ್ಣಗಳೂ ಸಹ ಈಗ ಮೊದಲಿಗಿಂತ ತುಟ್ಟಿಯಾಗಿರುವದರಿಂದ ಗಣಪನಿಗೆ ಬಣ್ಣ ಹಚ್ಚುವುದೂ ಕೂಡ ದುಬಾರಿ ಎನ್ನಿಸುತ್ತಿದೆ. ಆದರೂ ಕಳೆದ ಮೂರು ದಶಕಗಳಿಂದ ನಮ್ಮನ್ನು ನಂಬಿರುವ ಗ್ರಾಹಕರಿಗೆ ಯಾವುದೇ ತೊಂದರೆಯಾಗಬಾರದು ಎಂದು ನಾವು ಈ ಕಾರ್ಯವನ್ನು ಮುಂದುವರೆಸಿದ್ದೇವೆ.
>
> **–ನಾಗಪ್ಪ ಬಡಿಗೇರ.**
>
> ಕೋಟುಮಚಗಿ.


### ಈಶ್ವರ ಸಮುದಾಯ ಭವನ, ಈಶ್ವರ ಸೇವಾ ಟ್ರಸ್ಟ್ ಉದ್ಘಾಟನೆ ನಾಳೆ

# ಪ್ರವಚನ ಸಮಾರೋಪ, ಸನ್ಮಾನ ಸಮಾರಂಭ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ರಾಜೀವ ಗಾಂಧಿ ನಗರದ ಈಶ್ವರ ಬಡಾವಣೆಯ ಶ್ರೀ ಈಶ್ವರ ಸಮುದಾಯ ಭವನ ಹಾಗೂ ಶ್ರೀ ಈಶ್ವರ ಸೇವಾ ಟ್ರಸ್ಟ್ ಉದ್ಘಾಟನಾ ಸಮಾರಂಭ ಮತ್ತು ಕೋಡಿಕೊಪ್ಪದ ಹಠಯೋಗಿ ಶ್ರೀ ವೀರಪ್ಪಜ್ಜನವರ ಜೀವನ ದರ್ಶನ ಪ್ರವಚನ ಸಮಾರೋಪ ಸಮಾರಂಭ ಆ. 24ರಂದು ಮುಂಜಾನೆ 11 ಗಂಟೆಗೆ ಜರುಗಲಿದೆ.

ಗದಗ-ಬೆಟಗೇರಿ ನಗರಸಭೆ ಹಾಗೂ ಶ್ರೀ ಈಶ್ವರ ಸೇವಾ ಟ್ರಸ್ಟ್‌ನಿಂದ ಜರುಗುವ ಈ ಕಾರ್ಯಕ್ರಮದ ಸಾನ್ನಿಧ್ಯವನ್ನು ಅಣ್ಣಿಗೇರಿ ದಾಸೋಹಮಠದ ಪೂಜ್ಯ ಸದ್ಗುರು ಡಾ. ಶಿವಕುಮಾರ ಮಹಾಸ್ವಾಮಿಗಳು ವಹಿಸುವರು. ಉದ್ಘಾಟನೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ನೆರವೇರಿಸುವರು. ಅಧ್ಯಕ್ಷತೆಯನ್ನು ನಗರಸಭೆಯ ವಿರೋಧ ಪಕ್ಷದ ನಾಯಕ ಎಲ್.ಡಿ. ಚಂದಾವರಿ ವಹಿಸುವರು.



ಮುಖ್ಯ ಅತಿಥಿಗಳಾಗಿ ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಅಪರ ಜಿಲ್ಲಾಧಿಕಾರಿ ಡಾ. ಕೆ.ಆರ್. ದುರಗೇಶ, ಪೌರಾಯುಕ್ತ ರಾಜಾರಾಮ ಪವಾರ, ಸ.ಕಾ.ಅ ಎಚ್.ಎ. ಬಂಡಿವಡ್ಡರ, ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ, ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ ಆಗಮಿಸುವರು.

ಕರ್ನಾಟಕ ವಾಣಿಜ್ಯರತ್ನ ಪ್ರಶಸ್ತಿ ಪುರಸ್ಕೃತರಾದ ಶರಣಬಸಪ್ಪ ಗುಡಿಮನಿ, ಜೀವಮಾನದ ಸಾಧನೆ ಪ್ರಶಸ್ತಿ ಪುರಸ್ಕೃತರಾದ ಚಂದ್ರು ಬಾಳಿಹಳ್ಳಿಮಠ, ಗಣ್ಯರಾದ ರಮೇಶ ದಿನ್ನಿ, ಎಚ್. ಎನ್. ಚಿಗರಿ, ಸುಮಿತ್ರಾ ಭಜಂತ್ರಿ, ಕೆ.ಎಚ್. ಚಟ್ಟಿ, ಈರಣ್ಣ ಮುದಗಲ್ಲ ಅವರಿಗೆ ಸನ್ಮಾನವಿದೆ. ಇದೇ ಸಂದರ್ಭದಲ್ಲಿ ಸಾಧಕರಿಗೆ, ದಾನಿಗಳಿಗೆ ಗೌರವಾರ್ಪಣೆ ಸಲ್ಲಿಸಲಾಗುವದು. ಪ್ರಸಾದ ಭಕ್ತಿ ಸೇವೆಯನ್ನು ಎಸ್.ಆರ್. ಅಂಗಡಿ ವಹಿಸಿಕೊಂಡಿದ್ದಾರೆ ಎಂದು ಕಾರ್ಯದರ್ಶಿ ಕೆ.ಬಿ. ಕಂಬಳಿ ತಿಳಿಸಿದ್ದಾರೆ.

> ಟ್ರಸ್ಟ್‌ನ ಗೌರವ ಅಧ್ಯಕ್ಷ ಚನ್ನಬಸಪ್ಪ ಅಕ್ಕಿ, ಅಧ್ಯಕ್ಷ ಎಂ.ಜಿ. ಸಂತೋಜಿ, ಕಾರ್ಯದರ್ಶಿ ಕೆ.ಬಿ. ಕಂಬಳಿ, ಸಂಘಟನಾ ಕಾರ್ಯದರ್ಶಿ ಚನ್ನಮ್ಮ ಸಂಶಿ ಉಪಸ್ಥಿತರಿರುವರು. ಪ್ರವಚನಕಾರರಾದ ಮುಖ್ಯೋಪಾಧ್ಯಾಯ ಎಸ್.ಬಿ. ದೊಡ್ಡಣ್ಣವರ 13ನೇ ವರ್ಷದ ಶ್ರಾವಣ ಮಾಸದ ಪ್ರವಚನ ಸಂಪನ್ನಗೊಳಿಸುವರು. ರತ್ನಾ ಮಂಟೂರಮಠ, ಮೋಹನ ಮೇರವಾಡೆ ಹಾಗೂ ಶಿವಶಂಕರ ದೊಡ್ಡಮನಿ ಅವರಿಂದ ಸಂಗೀತವಿದೆ.

# ಒಂದೇ ರಾತ್ರಿ 6 ಮನೆಗಳಿಗೆ ಕನ್ನ!

▸▸ಮೊದಲನೇ ಪುಟದಿಂದ

ಕಳ್ಳತನವಾಗಿರುವ ಪ್ರತಿ ಮನೆಗಳಿಗೆ ತೆರಳಿ ಕಳ್ಳತನವಾಗಿರುವ ವಸ್ತುಗಳ ಬಗ್ಗೆ ಮಾಹಿತಿ ಪಡೆದುಕೊಂಡರು. ಡಿವಾಯ್‌ಎಸ್ಪಿ ಪ್ರಭುಗೌಡ ಕಿರೇದಹಳ್ಳಿ, ಸಿಪಿಐ ಎಸ್.ಎಸ್. ಬಿಳಗಿ, ಪಿಎಸ್‌ಐ ಪ್ರಕಾಶ ಬಣಕಾರ, ಐಶ್ವರ್ಯ ನಾಗರಾಳ, ಪ್ರಕಾಶ ಸೇರಿದಂತೆ ಸಿಬ್ಬಂದಿಗಳು ಪ್ರಕರಣದ ಮಾಹಿತಿಗಳನ್ನು ಕಲೆಹಾಕುತ್ತಿದ್ದಾರೆ. ರೋಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



# ಸಾರ್ವಜನಿಕರ ಗಮನಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ ಈ ಆಸ್ತಿ ಮ್ಯುಟೇಶನ್ ಅಡಿಯಲ್ಲಿ ಬರುವ ಅರ್ಜಿಗಳನ್ನು ಭೌತಿಕವಾಗಿ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.


ಇ-ಆಸ್ತಿ ತಂತ್ರಾಂಶದಲ್ಲಿ ಸಿಟಿಜನ್ ಲಾಗಿನ್ ಮತ್ತು ಕರ್ನಾಟಕ ಒನ್ ಕೇಂದ್ರಗಳ ಮೂಲಕ ಮಾತ್ರ ಇ-ಆಸ್ತಿ (ನಮೂನೆ-03) ಮತ್ತು ಮ್ಯುಟೇಶನ್ ಖಾತಾ ಬದಲಾವಣೆ ಅರ್ಜಿಗಳನ್ನು ಸಾರ್ವಜನಿಕರು ಸಲ್ಲಿಸತಕ್ಕದ್ದು. ಆನ್‌ಲೈನ್ ಮೂಲಕ ಬರುವ ಅರ್ಜಿಗಳನ್ನು ಮಾತ್ರ ಪರಿಗಣಿಸಲಾಗುವುದು ಮತ್ತು ಡಾಟಾ ಎಂಟ್ರಿ ಆಪರೇಟರ್ ಕಡೆಯಲ್ಲಿ ಸಾರ್ವಜನಿಕರು ಯಾವುದೇ ಅರ್ಜಿಯನ್ನು ನೀಡಬಾರದು. ನೀಡಿದ್ದಲ್ಲಿ ಅಂತಹ ಅರ್ಜಿಗಳನ್ನು ಪರಿಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ ಎಂದು ನಗರಸಭೆ ಪೌರಾಯುಕ್ತರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಗರಸಭೆಯು ಯಾವುದೇ ಮಧ್ಯವರ್ತಿಗಳು ಹೊಂದಿರುವುದಿಲ್ಲ ಮತ್ತು ಪ್ರೋತ್ಸಾಹಿಸುವುದಿಲ್ಲ. ಮಧ್ಯವರ್ತಿಗಳು ಕಂಡು ಬಂದರೆ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಈ ಮೂಲಕ ಎಚ್ಚರಿಕೆ ನೀಡಲಾಗಿದೆ. ಕಾರಣ ಸಾರ್ವಜನಿಕರು ಮತ್ತು ತಮ್ಮ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಿ ನಿಗದಿತ ಅವಧಿಯಲ್ಲಿ ಸೇವೆಯನ್ನು ಪಡೆಯಲು ಪೌರಾಯುಕ್ತರು ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

▸▸ಮೊದಲನೇ ಪುಟದಿಂದ

ತಾಲೂಕು ಪಂಚಾಯತ್, ಗದಗ 8867556465, ಬಸವರಾಜ ಓಲಿ, ತಾಲೂಕು ಪಂಚಾಯತ್, ರೋಣ-9741615926, ಶಶಿಕಲಾ ವಡ್ಡಟ್ಟಿ, ತಾಲೂಕು ಪಂಚಾಯತ್, ಮುಂಡರಗಿ 9611922445, ಭಾರತಿ ಮುರಶಿಳ್ಳಿ, ತಾಲೂಕು ಪಂಚಾಯತ್, ಶಿರಹಟ್ಟಿ 8951128679 ಶಿವಾನಂದ ಹಾದಿಮನಿ, ತಾಲೂಕು ಪಂಚಾಯತ್, ನರಗುಂದ 9591679022 ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಗದಗ ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ:029ರ ದೂರವಾಣಿ ಸಂಖ್ಯೆ: 08372-220419 ಮೂಲಕ ಸಂಪರ್ಕಿಸಬಹುದು ಎಂದು ಅಂಗವಿಕಲರ ಕಲ್ಯಾಣಾಧಿಕಾರಿ ಕೆ.ಮಹಾಂತೇಶ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.





**ಗದಗ:** ಸಂಭಾಪೂರ ರಸ್ತೆಯಲ್ಲಿನ ಪೊಲೀಸ್ ವಸತಿ ಗೃಹದ ಬಳಿ ಇರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕ್ರಶ್ ಕೇಂದ್ರದಲ್ಲಿ ಕೃಷ್ಣ ಜಯಂತಿ ಆಚರಿಸಲಾಯಿತು. ಕೇಂದ್ರದ ಪುಟಾಣಿ ವಿದ್ಯಾರ್ಥಿಗಳು ವಿಧವಿಧವಾದ ಕೃಷ್ಣ ರಾಧೆಯರ ವೇಷದಲ್ಲಿ ಭಾಗಿಯಾಗಿ ಗಮನ ಸೆಳೆದರು. ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಿರಿಯ ಸೂಪರ್‌ವೈಸರ್ ಹಾಗೂ ಕೇಂದ್ರದ ಶಿಕ್ಷಕರಾದ ಚಂದ್ರಕಲಾ ಇಟಗಿಮಠ, ಸಿಬ್ಬಂದಿಗಳಾದ ನೇತ್ರಾ ಮಹೇಂದ್ರಕರ್, ಪರವಿನಭಾನು ಹಾಗೂ ಪಾಲಕರು ಉಪಸ್ಥಿತರಿದ್ದರು.

# ನಿಧನ

## ಅಂದಪ್ಪ ಪೂಜಾರ



**ಗದಗ:** ರೋಣ ತಾಲೂಕಿನ ಹೊಸಹಳ್ಳಿ ಗ್ರಾಮದ ಅಂದಪ್ಪ ಪೂಜಾರ (79) ಶುಕ್ರವಾರ ನಿಧನರಾದರು. ಮೃತರು ಓರ್ವ ಪುತ್ರ, ನಾಲ್ಕು ಜನ ಪುತ್ರಿಯರು ಹಾಗೂ ಅಪಾರ ಬಂಧು ಬಳಗವನ್ನುಅಗಲಿದ್ದಾರೆ.

# ಪ್ರಸಾದ ನಿಲಯದ ಕಾರ್ಯ ಶ್ಲಾಘನೀಯ



■ವಿಜಯಸಾಕ್ಷಿ ಸುದ್ದಿ, ಗದಗ

ಹಸಿದವರಿಗೆ ಅನ್ನ ನೀಡುವುದು ಎಲ್ಲ ಕಾರ್ಯಗಳಂತಲೂ ಹೆಚ್ಚು ಪುಣ್ಯದ ಕಾರ್ಯವಾಗಿದೆ. ಇದನ್ನು ನಿರಂತರವಾಗಿ ನಡೆಸಿಕೊಂಡು ಬರುತ್ತಿರುವ ಶ್ರೀ ಅನ್ನಪೂರ್ಣೇಶ್ವರಿ ಪ್ರಸಾದ ನಿಲಯದ ಸೇವಾ ಕಾರ್ಯ ಶ್ಲಾಘನೀಯ ಎಂದು ಖ್ಯಾತ ಮನೋರೋಗ ಚಿಕಿತ್ಸಕ ಹಾಗೂ ಜ. ತೋಂಟದಾರ್ಯ ವಿದ್ಯಾಪೀಠದ ಆಡಳಿತ ಮಂಡಳಿ ಸದಸ್ಯರಾದ ಡಾ. ಆನಂದ ಪಾಂಡುರಂಗಿ ಹೇಳಿದರು.

ಅವರು ನಗರದ ಮಹಾತ್ಮ ಗಾಂಧಿ ವೃತ್ತದ ಬಳಿಯ ಹಳೇ ಜಿಲ್ಲಾಸ್ಪತ್ರೆ ಆವರಣದಲ್ಲಿರುವ ಶ್ರೀ ಅನ್ನಪೂರ್ಣೇಶ್ವರಿ ಪ್ರಸಾದ ನಿಲಯದಲ್ಲಿ ಪ್ರಸಾದ ವಿತರಿಸಿ ಮಾತನಾಡಿದರು.

ಇನ್ನೋರ್ವ ಅತಿಥಿ, ಕುಷ್ಟಗಿಯ ಮಾಜಿ ಶಾಸಕ ಕೆ. ಶರಣಪ್ಪನವರು ಸೇವೆಯ ಬಗ್ಗೆ ಅಭಿಮಾನ ವ್ಯಕ್ತ ಪಡಿಸಿದರು. ಈ ಸಂದರ್ಭದಲ್ಲಿ ಜ. ತೋಂಟದಾರ್ಯ ವಿದ್ಯಾಪೀಠದ ಆಡಳಿತಾಧಿಕಾರಿ ಎಸ್.ಎಸ್. ಪಟ್ಟಣಶೆಟ್ಟಿ, ಹಿರಿಯರಾದ ಎಸ್.ಎಸ್. ಕಳಸಾಪೂರ ಹಾಗೂ ಶ್ರೀ ಅನ್ನಪೂರ್ಣೇಶ್ವರಿ ಪ್ರಸಾದ ನಿಲಯದ ಗೌರವಾಧ್ಯಕ್ಷ ಎಸ್.ಎಸ್. ಕಳಸಾಪೂರ ಮುಂತಾದವರು ಉಪಸ್ಥಿತರಿದ್ದರು.

**ಗಂಗಿಮಡಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಅಮೃತ ಭೋಜನ-17**

# ಮೌಲ್ಯಗಳು ಸಮತೋಲಿತ ಜೀವನಕ್ಕೆ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಾನವೀಯ ಮೌಲ್ಯಗಳು ವಿದ್ಯಾರ್ಥಿ ಜೀವನದ ಅವಿಭಾಜ್ಯ ಅಂಗ. ಮಕ್ಕಳನ್ನು ಭವಿಷ್ಯತ್ತಿನ ಉತ್ತಮ ವ್ಯಕ್ತಿಗಳನ್ನಾಗಿ ರೂಪಿಸುವುದರೊಂದಿಗೆ ಪರಿಸರದಲ್ಲಿ ಸಕಾರಾತ್ಮಕ ಬದಲಾವಣೆಗಳನ್ನು ತರಲು ಸಹಾಯವಾಗುತ್ತವೆ. ಮಾನವೀಯ ಮೌಲ್ಯಗಳು ವಿದ್ಯಾರ್ಥಿಗಳಿಗೆ ಸಮತೋಲಿತ ಜೀವನ ನಡೆಸಲು ಅತ್ಯಂತ ಸಹಕಾರಿ ಎಂದು ವೇ.ಮೂ. ಶಂಭುಲಿಂಗಯ್ಯ ಕಲ್ಮಠ ಹೇಳಿದರು.

ಅವರು ಶುಕ್ರವಾರ ಗದುಗಿನ ಗಂಗಿಮಡಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಗದಗ ಜಿಲ್ಲಾ ಅಕ್ಕಮಹಾದೇವಿಯ ಕದಳಿಶ್ರೀ ವೇದಿಕೆಯಿಂದ ಜರುಗಿದ ಅಮೃತ ಭೋಜನ-ಜ್ಞಾನಸಿಂಚನ ಮಾಲಿಕೆ-17ರಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಕ್ಕಳಿಗೆ ಹಿತನುಡಿಗಳನ್ನು ಹೇಳಿದರು.

ಸಹಾನುಭೂತಿ, ಪ್ರಾಮಾಣಿಕತೆ, ಗೌರವ ಹಾಗೂ ಜವಾಬ್ದಾರಿಗಳು ಉತ್ತಮ ವ್ಯಕ್ತಿತ್ವವನ್ನು ಬೆಳೆಸುವಲ್ಲಿ



ಸಹಕಾರಿಯಾಗಿವೆ. ಶಿಕ್ಷಕರು ಮತ್ತು ಪೋಷಕರು ವಿದ್ಯಾರ್ಥಿಗಳಿಗೆ ಉತ್ತಮ ವ್ಯಕ್ತಿತ್ವ ನಿರ್ಮಾಣದ ಮಾದರಿ ನಡಾವಳಿಗಳನ್ನು ಮಕ್ಕಳಿಗೆ ತಿಳಿಸಿ ಹೇಳಬೇಕು ಹಾಗೂ ವರ್ಗಕೋಣೆಗಳಲ್ಲಿ ಮೌಲ್ಯಗಳ ಕುರಿತಾಗಿ ಚರ್ಚೆ- ಸಂವಾದಗಳನ್ನು ನಡೆಸುವುದರೊಂದಿಗೆ ಮಕ್ಕಳು ಇದರಲ್ಲಿ ಭಾಗಿಗಳಾಗಬೇಕು. ಅಂದಾಗ ಮಕ್ಕಳು ಉತ್ತಮ ಬದುಕಿನ ದಾರಿಯನ್ನು ಈಗಲೇ ರೂಪಿಸಿಕೊಳ್ಳುತ್ತಾರೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಲಲಿತಾ ಉಮನಾಬಾದಿ ಮಾತನಾಡಿ, ಸಾಹಿತ್ಯ ಹಾಗೂ ಕಲೆಗಳ ಮೂಲಕ ಮೌಲ್ಯಗಳನ್ನು ವಿದ್ಯಾರ್ಥಿಗಳಿಗೆ ತಿಳಿಸುವ ಕೆಲಸ ಶಾಲೆ ಹಾಗೂ ಮನೆಯಲ್ಲಿಯೂ ನಡೆಯಬೇಕು. ಬಾಲ್ಯವು ಸುಂದರಮಯವಾಗಿ ಕಳೆಯಬೇಕಾಗಿರುವುದರಿಂದ ಈಗಲೇ ವಿದ್ಯಾರ್ಥಿಗಳು ಹಿರಿಯರ ಅನುಭವಗಳೊಂದಿಗೆ ತಮ್ಮ ಬದುಕನ್ನು ರೂಪಿಸಿಕೊಳ್ಳಬೇಕು ಎಂದರು.

ಅತಿಥಿಗಳಾಗಿ ಆಗಮಿಸಿದ್ದ ಮೈನುದ್ದಿನ ಹಣಗಿ ಮಾತನಾಡಿ, ಆಸಕ್ತಿದಾಯಕ ಹಾಗೂ ಅರ್ಥಪೂರ್ಣ ಕಲಿಕೆಯು ವಿದ್ಯಾರ್ಥಿಗಳಿಗೆ ಸ್ಫೂರ್ತಿ ನೀಡುತ್ತವೆ. ಸಮಾಜ ಸೇವೆಯಲ್ಲಿ ಮಕ್ಕಳು ತಮ್ಮನ್ನೇ ತಾವು ತೊಡಗಿಸಿಕೊಳ್ಳುವ ಮೂಲಕ ಕಲಿತ ಶಾಲೆಗೂ ಹೆತ್ತವರಿಗೂ ಕೀರ್ತಿ ತರಬೇಕು. ಸಮಾಜದಲ್ಲಿನ ಮಾನವೀಯತೆಯನ್ನು ಮೌಲ್ಯವಾದ ಮೌಲ್ಯವೆಂದೇ ಪರಿಗಣಿಸಬೇಕು. ಸತ್ಯ, ಪ್ರೀತಿ, ಕ್ಷಮೆ, ದಯೇ ಮುಂತಾದ ಮಾನವ ಮೌಲ್ಯಗಳನ್ನು ಗುರುತಿಸುವ ಮೂಲಕ ನಾವು ಮಾನವ ಏಕತೆಯನ್ನು ಸಾಧಿಸುವ ಪ್ರಯತ್ನ ಮಾಡಬೇಕು ಎಂದರು.

ಚಿಂತಕಿ ಸುವರ್ಣ ವಸ್ತ್ರದ ಮಾತನಾಡಿ, ಸಮಾಜದಲ್ಲಿ ಮಾನವೀಯ ಮೌಲ್ಯಗಳು ನಿರ್ಣಾಯಕ ಪಾತ್ರವನ್ನು ವಹಿಸುತ್ತವೆ. ಇವು ಬದುಕಿಗೆ ಗಟ್ಟಿಯಾದ ಅಡಿಪಾಯವನ್ನು ಹಾಕುತ್ತವೆ. ಎಲ್ಲ ಧರ್ಮಗಳ ಪವಿತ್ರ ಗ್ರಂಥಗಳು ಉತ್ತಮ ಜೀವನದ ಮೌಲ್ಯಗಳ ಕುರಿತು ಹೇಳುತ್ತವೆ. ಸಾಂಪ್ರಾದಾಯಕ ಪದ್ಧತಿಗಳು ಮತ್ತು ಪರಂಪರೆಗಳ ಕುರಿತಾಗಿ ಮೌಲ್ಯ ಶಿಕ್ಷಣದ ಬೋಧನೆಯೊಂದಿಗೆ ಮಕ್ಕಳಲ್ಲಿ ನಮ್ಮ ಸಂಸ್ಕೃತಿಯ ಪರಿಚಯ ಮಾಡಿಸುವ ಕಾರ್ಯವನ್ನು ನಾವೆಲ್ಲರೂ ಮಾಡಬೇಕಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಶಾಲಾ ಮುಖ್ಯೋಪಾಧ್ಯಾಯೆ ಆರ್.ಬಿ. ಸಂಕಣ್ಣವರ ಮಾತನಾಡಿ, ವಿದ್ಯಾರ್ಥಿಗಳು ಓದುವ ಮತ್ತು ಬರೆಯುವ ಜ್ಞಾನದೊಂದಿಗೆ ಬದುಕಿಗೆ ಅಗತ್ಯವಾದ ಅರಿವು-ಅನುಭವಗಳನ್ನು ರೂಢಿಸಿಕೊಂಡು ಬೆಳೆಯಬೇಕು. ಕದಳಿಶ್ರೀ ವೇದಿಕೆಯು ಮಕ್ಕಳಿಗೆ ಅಮೃತಭೋಜನದೊಂದಿಗೆ ಜ್ಞಾನ ಸಿಂಚನ ನೀಡುವಂತಹ ಉತ್ತಮ ಮೌಲ್ಯಾಧಾರಿತ ಕಾರ್ಯಕ್ರಮವನ್ನು ನಡೆಸುತ್ತಿದೆ. ಇದರಿಂದ ಮಕ್ಕಳಿಗೆ ಹೊಸ ಅನುಭವ ಉಂಟಾಗಿ ಕಲಿಕೆಯ ಮೇಲೆ ಸಕಾರಾತ್ಮಕ ಪರಿಣಾಮ ಮೂಡುತ್ತದೆ ಎಂದರು.

ಕವಿತಾ ಬೇಲೇರಿ ಸ್ವಾಗತಿಸಿದರು. ವಿ.ಆರ್. ಹಾಂಶಿ ಪರಿಚಯಿಸಿದರು. ಜಿ.ಎಸ್. ಬೆಳಹಾರ ನಿರೂಪಿಸಿದರು. ಐ.ಡಿ. ಕಬ್ಬೇರಹಳ್ಳಿ ವಂದಿಸಿದರು. ಕಾರ್ಯಕ್ರಮದಲ್ಲಿ ಡಿ.ಎಸ್. ಮಿಶೇನವರ, ಆರ್.ಡಿ. ಮಗಜಿ, ಆರ್.ಬಿ. ಹಾದಿಮನಿ, ಸುನೀತಾ ರಾಮದುರ್ಗ, ದೀಪಾ ಮುಂಡೇವಾಡಿ, ಶಬಾನಾ ಮುಲ್ಲಾ, ಉಮಾ ವಡೆಪಲ್ಲೆ ಮುಂತಾದವರು ಉಪಸ್ಥಿತರಿದ್ದರು.

# ಪುರಾಣ ಶ್ರವಣದಿಂದ ಸದ್ಗುಣ ಪ್ರಾಪ್ತಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶ್ರಾವಣ ಮಾಸದ ಪುಣ್ಯ ಕಾಲದಲ್ಲಿ ಸಂತರು, ಶರಣರು, ಮಹಾತ್ಮರು ತಿಳಿಸಿದ ಜೀವನ ಮೌಲ್ಯಗಳು, ಆದರ್ಶ ಚಿಂತನೆಗಳನ್ನು ಕೇಳುವುದರಿಂದ ಮನಸ್ಸಿನ ದುರ್ಗುಣಗಳು ಕಳೆದು ಸದ್ವಿಚಾರ, ಸದ್ಗುಣಗಳನ್ನು ಹೊಂದಲು ಸಾಧ್ಯವಾಗುತ್ತದೆ ಎಂದು ಮಾಜಿ ಶಾಸಕ, ಶರಣ ಚಿಂತಕರಾದ ಡಿ.ಆರ್. ಪಾಟೀಲ ಹೇಳಿದರು.




ಅವರು ಬುಧವಾರ ಪಟ್ಟಣದ ಶ್ರೀ ಸೋಮೇಶ್ವರ ಪುರಾಣ ಸೇವಾ ಸಮಿತಿಯಿಂದ ಹಮ್ಮಿಕೊಂಡಿರುವ ಶ್ರೀ ಸಿದ್ಧಾರೂಢ ಕಥಾಮೃತ ಪುರಾಣ ಪ್ರವಚನದಲ್ಲಿ ಮಾತನಾಡಿ, ಟಿವಿ, ಮೊಬೈಲ್ ತಂತ್ರಜ್ಞಾನದ ದುನಿಯಾದಲ್ಲಿ ಪುರಾಣ, ಪುಣ್ಯಕಥೆ, ಧಾರ್ಮಿಕ ಆಚರಣೆ, ಸಂಪ್ರದಾಯ ಮರೆಯುತ್ತಿರುವುದು ದುರ್ದೈವದ ಸಂಗತಿ. ಬದುಕಿನ ಜಂಜಾಟದ ನಡುವೆ ಧರ್ಮಕಾರ್ಯ, ಸತ್ಸಂಗ, ಪುರಾಣ-ಪುಣ್ಯಕಥೆ ಆಲಿಸುವುದರಿಂದ ಸಾರ್ಥಕ ಬದುಕಿನ ಮಾರ್ಗ ತೆರೆದುಕೊಳ್ಳುತ್ತದೆ. ಜೀವನದುದ್ದಕ್ಕೂ ಧರ್ಮ, ಪರಂಪರೆ, ಸಂಸ್ಕೃತಿ, ಸಮನ್ವಯತೆ ಹೀಗೆ ಲೋಕಕಲ್ಯಾಣಕ್ಕಾಗಿ ತಮ್ಮನ್ನು ಸಮರ್ಪಿಸಿಕೊಂಡು ಇಂದಿಗೂ ಎಂದೆಂದಿಗೂ ದಾರಿ ದೀಪವಾಗಿರುವವರು ಲಿಂ.ಶ್ರೀ ಸಿದ್ಧಾರೂಢ ಶರಣರು. ಐತಿಹಾಸಿಕ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಇಂತಹ ಸತ್ಪುರುಷರ ವಿಚಾರಗಳನ್ನು ಆಲಿಸುವುದು ಮತ್ತು ಅವರ ಮೌಲ್ಯಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳುವುದರಿಂದ ಜೀವನ ಪಾವನವಾಗುತ್ತದೆ. ಕಳೆದ 13 ವರ್ಷಗಳಿಂದ ದೇವಸ್ಥಾನದಲ್ಲಿ ಪುರಾಣ ಪ್ರವಚನ ನಡೆಸುತ್ತಾ ಬರುತ್ತಿರುವ ಸಮಿತಿಯವರ ಕಾರ್ಯ ಅಭಿನಂದನಾರ್ಹವಾಗಿದೆ ಎಂದರು.

ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್‌ನ ಅಧ್ಯಕ್ಷ ಗುರಣ್ಣ ಪಾಟೀಲ ಕುಲಕರ್ಣಿ, ಚನ್ನಪ್ಪ ಜಗಲಿ, ಸುನೀಲ ಮಹಾಂತಶೆಟ್ಟರ, ಪ್ರವೀಣ ಬಾಳಿಕಾಯಿ, ವಿರೂಪಾಕ್ಷ ಆದಿ, ಮಯೂರ ಪಾಟೀಲ, ನಂದೀಶ ಬಂಡಿವಾಡ, ಸೋಮಶೇಖರ ಕೆರಿಮನಿ, ಜಿ.ಎಸ್. ಗುಡಗೇರಿ ಮುಂತಾದವರಿದ್ದರು.

ಡಾ.ಪಂಡಿತ ಪುಟ್ಟರಾಜ ಗವಾಯಿಗಳ ಶಿಷ್ಯ ಪಂ. ಗುರುಶಾಂತಯ್ಯ ಶಾಸ್ತ್ರಿ ಆರಾಧ್ಯಮಠ ಗವಾಯಿಗಳು ಪುರಾಣ ಪಠಣ-ಪ್ರವಚನಗೈದರೆ ವಿಜಯಕುಮಾರ ಸುತಾರ ತಬಲಾ ಸಾಥ್ ನೀಡಿದರು.

# ಕ್ರೀಡೆಯಿಂದ ದೈಹಿಕ ಸದೃಢತೆ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಕ್ರೀಡೆ ಮನುಷ್ಯನ ದೈಹಿಕ ಮತ್ತು ಮಾನಸಿಕ ಸದೃಢತೆಯನ್ನು ಹೆಚ್ಚಿಸುವುದರೊಂದಿಗೆ ಪರಿಪೂರ್ಣ ಆರೋಗ್ಯಕ್ಕೆ ಸಹಕಾರಿಯಾಗಿದೆ ಎಂದು ಮೊರಾರ್ಜಿ ವಸತಿ ಶಾಲೆಯ ಪ್ರಾಚಾರ್ಯ ಎಚ್. ಆರ್. ಸಕ್ರಿ ಹೇಳಿದರು.

ಅವರು ಮೊರಾರ್ಜಿ ವಸತಿ ಶಾಲೆಯಲ್ಲಿ ಆಯೋಜಿಸಿದ್ದ ಮುಳಗುಂದ ಪ್ರಾಥಮಿಕ ಶಾಲಾ ಕ್ಲಸ್ಟರ್ ಮಟ್ಟದ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿ, ಮಕ್ಕಳು ಪ್ರಾಥಮಿಕ ಹಂತದಲ್ಲಿ ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆ ಹಾಗೂ ಕ್ರೀಡಾಕೂಟದಲ್ಲಿ ಭಾಗವಹಿಸಬೇಕು. ಇದರಿಂದ ವ್ಯಕ್ತಿತ್ವ ವಿಕಸನದ ಜೊತೆಯಲ್ಲಿ ದೈಹಿಕ ಹಾಗೂ ಮಾನಸಿಕವಾಗಿ ಸದೃಢರಾಗುತ್ತಾರೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ, ಶಂಕರ ಹಡಗಲಿ, ಎಂ.ವಿ. ಪಾಟೀಲ್, ಎಸ್.ಬಿ. ಆಲೂರ, ದಿ.ಸಿ. ನದಾಫ್, ಟಿ.ಉದಯಕುಮಾರ, ಎನ್.ಕೆ. ಅಂಬಕ್ಕಿ, ವಿ.ಡಿ. ಸಿದ್ದನಗೌಡರ, ಸಿ.ಕೆ. ಭಜಂತ್ರಿ ಶಾಲಾ ಶಿಕ್ಷಕರ ವೃಂದ ಹಾಗೂ ಕ್ಲಸ್ಟರ್ ಮಟ್ಟದ ಕ್ರೀಡಾಪಟುಗಳು ಇದ್ದರು.

# 'ಐತಿಹಾಸಿಕ ಪರಂಪರೆ ಉಳಿಸಿ' ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಗದಗ ವತಿಯಿಂದ ಆಗಸ್ಟ್ 23ರಂದು ಸಂಜೆ 6.30 ಗಂಟೆಗೆ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನ, ಸಾಹಿತ್ಯ ಪರಿಷತ್ ಕಾರ್ಯಾಲಯದಲ್ಲಿ 'ಐತಿಹಾಸಿಕ ಪರಂಪರೆ ಉಳಿಸಿ' ಕಾರ್ಯಕ್ರಮದ ಅಂಗವಾಗಿ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

'ಐತಿಹಾಸಿಕ ಪರಂಪರೆ ರಕ್ಷಣೆ ನಮ್ಮ ಹೊಣೆ' ವಿಷಯವಾಗಿ ಶಾಸನ ತಜ್ಞರು ಹಾಗೂ ಕರ್ನಾಟಕ ಇತಿಹಾಸ ಅಕಾಡೆಮಿಯ ಅಧ್ಯಕ್ಷರಾದ ಡಾ. ದೇವರಕೊಂಡಾರೆಡ್ಡಿ ಮಾತನಾಡುವರು. ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು. ಮುಖ್ಯ ಅತಿಥಿಗಳಾಗಿ ಗದಗ ಜಿಲ್ಲಾ ಪದವಿಪೂರ್ವ ಉಪನ್ಯಾಸಕರ ಸಂಘದ ಅಧ್ಯಕ್ಷ ಎಸ್.ಎಸ್. ಸೋಮಣ್ಣವರ ಭಾಗವಹಿಸುವರು. ಗದಗ ಜಿಲ್ಲಾ ಇತಿಹಾಸ ಅಕಾಡೆಮಿ ಅಧ್ಯಕ್ಷ ಡಾ. ವಾಯ್.ಆರ್. ಬೇಲೇರಿ ಉಪಸ್ಥಿತರಿರುವರು.

ಸದಸ್ಯರು, ಆಸಕ್ತರು ಕಾರ್ಯಕ್ರಮದಲ್ಲಿ ಭಾಗಿಯಾಗಬೇಕೆಂದು ಕಿಶೋರಬಾಬು ನಾಗರಕಟ್ಟಿ, ಡಿ.ಎಸ್. ಬಾಪುರಿ, ದತ್ತಪ್ರಸನ್ನ ಪಾಟೀಲ ಹಾಗೂ ಕೆ.ಎಂ. ಗರಗ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಉಚಿತ ಆರೋಗ್ಯ ತಪಾಸಣೆ, ರಕ್ತದಾನ




■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಲಯನ್ಸ್ ಕ್ಲಬ್, ಲಯನ್ಸ್ ಲೇಡೀಸ್ ಕ್ಲಬ್, ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್‌ನ ಸುವರ್ಣ ಮಹೋತ್ಸವದ ಅಂಗವಾಗಿ ಚೇಂಬರ್ ಸಹಯೋಗದಲ್ಲಿ ಉಚಿತ ಆರೋಗ್ಯ ತಪಾಸಣೆ ಹಾಗೂ ರಕ್ತದಾನ ಶಿಬಿರವನ್ನು ಕೆ.ಎಚ್. ಪಾಟೀಲ ಸಭಾಂಗಣದಲ್ಲಿ ಏರ್ಪಡಿಸಲಾಗಿತ್ತು.

ಡಾ. ತುಕಾರಾಮ ಸೋರಿ, ಡಾ. ವೀರೇಶ ಪ್ಪಿ.ಡಿ, ಡಾ. ಪ್ರವೀಣ ಸಜ್ಜನರ, ಡಾ. ಜಗದೀಶ ಶಿರೋಳ, ಡಾ. ಜಿ.ಜಿ. ಬಿಡಿನಹಾಳ, ಡಾ. ಶ್ರೀಧರ ಕುರಡಗಿ, ಡಾ. ಭೀಮಸಿಂಗ್, ಡಾ. ನವೀನ ಹಿರೇಗೌಡ್ರ, ಡಾ. ಶಿಲ್ಪಾ ಧಡೂತಿ, ಡಾ. ತೇಜಸ್ವಿನಿ ಹಿರೇಮಠ, ಡಾ. ಸುನೀತಾ ಕುರಡಗಿ, ಡಾ. ಈರಣ್ಣ ಹಳೇಮನಿ ಉಚಿತ ಆರೋಗ್ಯ ತಪಾಸಣೆಯನ್ನು ಯಶಸ್ವಿಯಾಗಿ ನಡೆಸಿಕೊಟ್ಟರು.

ಈ ಸಂದರ್ಭದಲ್ಲಿ ಚೇಂಬರ್ ಅಧ್ಯಕ್ಷ ತಾತನಗೌಡ ಪಾಟೀಲ, ಉತ್ಸವ ಸಮಿತಿ ಚೇರಮನ್ ಆನಂದ ಪೋತ್ನೀಸ್, ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಅಧ್ಯಕ್ಷ ರಾಜು ವೇರ್ಣೆಕರ ಕಾರ್ಯದರ್ಶಿ ರಾಜಣ್ಣ ಮಲ್ಲಾಡದ, ಕೋಶಾಧ್ಯಕ್ಷ ರೇಣುಕಪ್ರಸಾದ ಹಿರೇಮಠ, ಲಯನ್ ಲೇಡೀಸ್ ಕ್ಲಬ್ ಅಧ್ಯಕ್ಷೆ ಪೂಜಾ ಪಾಟೀಲ, ಕಾರ್ಯದರ್ಶಿ ಸುರೇಖಾ ಮಲ್ಲಾಡದ, ಕೋಶಾಧ್ಯಕ್ಷೆ ಸಹನಾ ಹಿರೇಮಠ, ಅಶ್ವಥ್ ಸುಲಾಖೆ, ಜೆ.ಡಿ. ಉತ್ತರಕರ, ರಮೇಶ ಶಿಗ್ಲಿ, ಪ್ರವೀಣ ವಾರಕರ, ಎಸ್.ಕೆ. ಶೆಟ್ಟರ, ನಿತೀಶ್ ಸಾಲಿ, ಅರವಿಂದ ಪಟೇಲ್, ರಘು ಮೇಹರವಾಡೆ, ಎಸ್.ಡಿ. ಪಾಟೀಲ, ಮಂಜುನಾಥ ವೀರಲಿಂಗಯ್ಯನಮಠ, ರಾಹುಲ್ ಅರಳಿ, ರತನ್ ದೇಸಾಯಿ, ವೀರೇಶ ಪಟ್ಟಣಶೆಟ್ಟಿ, ವೀಣಾ ಸುಲಾಖೆ, ಸಾವಿತ್ರಿ ಶಿಗ್ಲಿ, ಮಧು ವೀರಲಿಂಗಯ್ಯನಮಠ, ಅಪರ್ಣಾ ತೋಟದ, ಅಮೃತಾ ವಾರಕರ, ರೂಪಾ ಉತ್ತರಕರ, ಅಶ್ವಿನಿ ನೀಲಗುಂದ ಮುಂತಾದವರು ಶಿಬಿರದ ಯಶಸ್ಸಿಗೆ ಶ್ರಮಿಸಿದರು.

ಆರೋಗ್ಯ ತಪಾಸಣೆ ನಡೆಸಿದ ವೈದ್ಯರು ಅಗತ್ಯ ಮಾರ್ಗದರ್ಶನ ನೀಡಿದರು. ಔಷಧ ವ್ಯಾಪಾರಸ್ಥರು ಉಚಿತ ಔಷಧ ಪೂರೈಸಿದರು.

**ಪಟ್ಟಣದಲ್ಲಿ ಸ್ವಚ್ಛತಾ ಕಾರ್ಯಗಳಿಗೆ ಚುರುಕು | ಶುಚಿಯಾದ ರಾಜಕಾಲುವೆ, ಸಾರ್ವಜನಿಕ ಶೌಚಾಲಯ**

# ಫಲ ನೀಡಿದ ಶಾಸಕರ ಎಚ್ಚರಿಕೆ

■ವಿಜಯಸಾಕ್ಷಿ ಸುದ್ದಿ, ರೋಣ

ರೋಣ ಪಟ್ಟಣದಲ್ಲಿ ಎಲ್ಲೆಂದರಲ್ಲಿ ಕಸ ಚೆಲ್ಲಿರುವುದರ ಕುರಿತು ಅಸಮಾಧಾನಗೊಂಡ ಶಾಸಕ ಜಿ.ಎಸ್. ಪಾಟೀಲ ಇತ್ತೀಚೆಗೆ ಕಾರ್ಯಕ್ರಮವೊಂದರಲ್ಲಿ ಮುಖ್ಯಾಧಿಕಾರಿ ಸೇರಿದಂತೆ ಸ್ಥಳೀಯ ಜನಪ್ರತಿನಿಧಿಗಳನ್ನು ತರಾಟೆಗೆ ತೆಗೆದುಕೊಂಡಿದ್ದರು. ಈ ಹಿನ್ನೆಲೆಯಲ್ಲಿ ಪಟ್ಟಣದ ಸರ್ವ ಸದಸ್ಯರು ಅಧ್ಯಕ್ಷ ಮತ್ತು ಉಪಾಧ್ಯಕ್ಷರ ನೇತೃತ್ವದಲ್ಲಿ ಪಟ್ಟಣದ ಸ್ವಚ್ಛತೆಗೆ ಮೊದಲ ಆದ್ಯತೆ ನೀಡುತ್ತಿರುವುದು ಕಂಡುಬರುತ್ತಿದೆ.



ಪಟ್ಟಣದ ಜಕ್ಕಲಿ ರಸ್ತೆಯಲ್ಲಿರುವ ರಾಜ ಕಾಲುವೆ ಸೇರಿದಂತೆ ಸಾರ್ವಜನಿಕ ಮಹಿಳಾ ಶೌಚಾಲಯದವರೆಗೆ ಸ್ವಚ್ಛತಾ ಕಾರ್ಯ ನಡೆದಿದ್ದು, ನಾಗರಿಕ ಸಮುದಾಯದಲ್ಲಿ ಸ್ವಲ್ಪ ಮಟ್ಟಿಗೆ ನಿರಾಳತೆ ಮೂಡುವಂತಾಗಿದೆ. ಸತತ ಮಳೆಯಿಂದ ಸಂಚಾರಕ್ಕೆ ದುಸ್ತರವಾದ ಸ್ಥಿತಿಯಲ್ಲಿದ್ದ ರಸ್ತೆಗಳನ್ನು ಜೆಸಿಬಿ ಮೂಲಕ ಸ್ವಚ್ಛಗೊಳಿಸಿ ಸಂಚಾರಕ್ಕೆ ಅನುವು ಮಾಡಲಾಗಿದೆ.

ಪುರಸಭೆಯ ಉಪಾಧ್ಯಕ್ಷ ಹನ್ಮಂತಪ್ಪ ತಳ್ಳಿಕೇರಿ ನಿತ್ಯ ಬೆಳಗಿನ ಜಾವ ಪುರಸಭೆ ಸಿಬ್ಬಂದಿಗಳು ನಿರ್ವಹಿಸುವ ಸ್ವಚ್ಛತಾ ಕಾರ್ಯವನ್ನು ವೀಕ್ಷಿಸಿ ಸಲಹೆ-ಸೂಚನೆಗಳನ್ನು ನೀಡುತ್ತಿರುವುದು ಪಟ್ಟಣದ ಜನರಲ್ಲಿ ಭರವಸೆ ಮೂಡಿಸುವಂತೆ ಮಾಡಿದೆ. ಅಧ್ಯಕ್ಷೆ ಬಸ್ಸಮ್ಮ ಕೊಪ್ಪದ ಕೂಡ ಸ್ವಚ್ಛತಾ ಕೆಲಸ ನಿರ್ವಹಿಸುವ ಸಿಬ್ಬಂದಿಗಳಿಗೆ ಪ್ರೋತ್ಸಾಹ ನೀಡುತ್ತಿರುವುದು ಕಂಡುಬರುತ್ತಿದೆ. ಒಟ್ಟಿನಲ್ಲಿ, ಶಾಸಕ ಜಿ.ಎಸ್. ಪಾಟೀಲರ ಖಡಕ್ ಸಂದೇಶದಿಂದ ಜನಪ್ರತಿನಿಧಿಗಳು ಸೇರಿ ಅಧಿಕಾರಿ ವರ್ಗ ಎಚ್ಚೆತ್ತು ಕೆಲಸ ನಿರ್ವಹಿಸುತ್ತಿರುವುದು ಕಂಡುಬರುತ್ತಿದೆ.

ಪಟ್ಟಣದ ಸೌಂದರ್ಯ ಹೆಚ್ಚಿಸಲು ಶಾಸಕ ಜಿ.ಎಸ್. ಪಾಟೀಲ ಸಾಕಷ್ಟು ಅನುದಾನ ಬಿಡುಗಡೆ ಮಾಡಿದ್ದಾರೆ. ಕೆಲ ವಾರ್ಡ್‌ಗಳಲ್ಲಿ ಅಭಿವೃದ್ಧಿ ಕಾರ್ಯಗಳು ಸಹ ನಡೆಯುತ್ತಿವೆ. ಈಗ ಮತ್ತೆ 5 ಕೋಟಿ ರೂಗಳನ್ನು ರೋಣ ಪಟ್ಟಣದ ಅಭಿವೃದ್ಧಿಗೆ ನೀಡಿದ್ದಾರೆ. ಎಲ್ಲ ಸದಸ್ಯರುಗಳು ತಮ್ಮ ವಾರ್ಡ್‌ಗಳ ಸ್ವಚ್ಛತೆಗೆ ಆದ್ಯತೆ ನೀಡಿದ್ದು, ಸ್ವಚ್ಛತಾ ಕಾರ್ಯ ಭರದಿಂದ ಸಾಗಿದೆ.

**– ಹನ್ಮಂತಪ್ಪ ತಳ್ಳಿಕೇರಿ.**
ಪುರಸಭೆ ಉಪಾಧ್ಯಕ್ಷರು.

ಈ ಕುರಿತು ರೋಣ ಪುರಸಭೆ ಮುಖ್ಯಾಧಿಕಾರಿ ರಮೇಶ ಹೊಸಮನಿ ಪ್ರತಿಕ್ರಿಯಿಸಿ, ನಿರಂತರ ಮಳೆಯಿಂದ ಸ್ವಚ್ಛತಾ ಕಾರ್ಯಕ್ಕೆ ಹಿನ್ನಡೆಯಾಗಿತ್ತು. ಶಾಸಕರು ಪಟ್ಟಣ ಅಂದವಾಗಿ ಕಾಣಬೇಕು ಎಂದು ಸೂಚಿಸಿದ್ದರು. ಹೀಗಾಗಿ 23 ವಾರ್ಡ್‌ಗಳಲ್ಲಿ ಸ್ವಚ್ಛತಾ ಕಾರ್ಯ ಭರದಿಂದ ಸಾಗಿದೆ ಎಂದರು.

# ಅಕ್ರಮ ಅಕ್ಕಿ ಸಂಗ್ರಹ: 3.6 ಕ್ವಿಂಟಲ್ ಪಡಿತರ ಅಕ್ಕಿ ವಶಕ್ಕೆ; ಆರೋಪಿ ಅರೆಸ್ಟ್!

■ವಿಜಯಸಾಕ್ಷಿ ಸುದ್ದಿ, ಗದಗ

ಅಕ್ರಮ ಅಕ್ಕಿ ದಂದ-ಕೋರರ ಮೇಲೆ ಆಹಾರ ಇಲಾಖೆ ಅಧಿಕಾರಿಗಳು ಹಾಗೂ ಪೊಲೀಸರು ದಾಳಿ ಮಾಡಿರುವ ಘಟನೆ ಗದಗದ ಬೆಟಗೇರಿಯ ಮಂಜುನಾಥ ನಗರದಲ್ಲಿ ಜರುಗಿದೆ.

ಬೆಟಗೇರಿಯ ಪೊಲೀಸರು ಹಾಗೂ ಆಹಾರ ಇಲಾಖೆಯ ಅಧಿಕಾರಿಗಳು ನಡೆಸಿದ ಜಂಟಿ ಕಾರ್ಯಾಚರಣೆಯಲ್ಲಿ ಅಕ್ರಮ ಅಕ್ಕಿ ದಂಧೆಯಲ್ಲಿ ಪಾಲ್ಗೊಂಡಿದ್ದ ಆರೋಪಿ ಅಹ್ಮದ್ ಯಲಿಗಾರನನ್ನು ವಶಕ್ಕೆ ಪಡೆಯಲಾಗಿದೆ. ಅಲ್ಲದೇ ಮನೆಯಲ್ಲಿ ಅಕ್ರಮವಾಗಿ



ಸಂಗ್ರಹಿಸಿಟ್ಟಿದ್ದ 3.6 ಕ್ವಿಂಟಲ್ ಅಕ್ಕಿಯನ್ನು ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ.

ಬೆಟಗೇರಿ ಪೊಲೀಸ ಠಾಣೆಯಲ್ಲಿ ಈ ಕುರಿತು ಪ್ರಕರಣ ದಾಖಲಾಗಿದೆ.

ಇನ್ನೂ ಗದಗ ಜಿಲ್ಲೆಯಲ್ಲಿ ಸಾಕಷ್ಟು ರೀತಿಯಲ್ಲಿ ಅಕ್ರಮವಾಗಿ ಅನ್ನಭಾಗ್ಯ ಅಕ್ಕಿ ಕಾಳಸಂತೆಯಲ್ಲಿ ಮಾರಾಟ ಮಾಡಲಾಗುತ್ತಿದೆ. ಬಡವರಿಗೆ ವಿತರಣೆ ಆಗಬೇಕಾಗಿರುವ ಪಡಿತರ ಅಕ್ಕಿಯನ್ನ ಕಾಳಸಂತೆಯಲ್ಲಿ ಹೆಚ್ಚಿನ ಬೆಲೆಗೆ ಮಾರಾಟ ಮಾಡಿ ಕೋಟ್ಯಾಂತರ ರೂ. ಕೊಳ್ಳೆ ಹೊಡೆಯುವ ಕೆಲಸ ಇಂದಿಗೂ ನಿಂತಿಲ್ಲ.

ಇದಕ್ಕೆ ಕಡಿವಾಣ ಹಾಕುವ ಕೆಲಸದಲ್ಲಿ ಅಧಿಕಾರಿಗಳು ಮುಂದಾಗಿಬೇಕಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka